ಸಂಪುಟ : 9 ಸಂಚಿಕೆ 284 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 284 Pages : 4+2 Price : 3.00 Tuesday December 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 24 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 12 – ಪಿ ಮತ್ತು ಟಿ ಕ್ವಾರ್ಟರ್ಸ್, ಕರಿಯಮ್ಮ ಕಲ್ಲು, ಗಣಪತಿ ಕಟ್ಟಿ, ರಾಘವೇಂದ್ರ ಗುಡಿ ಭಾಗ, ಚರ್ಚ್ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 33 – ಮುಳಗುಂದ ನಾಕಾ, ಹುಬ್ಬಳ್ಳಿ ರಸ್ತೆ, ಕೇಶವ ನಗರ, ಬ್ಯಾಂಕರ್ಸ್ ಕಾಲೋನಿ, ಪಂಚಮುಖಿ ದೇವಸ್ಥಾನ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ಕಮತರ ಪ್ಲಾಟ್, ಶಿಗ್ಗಾವಿ ಲೇಔಟ್, ವಾಲ್ಮೀಕಿ ಭವನ, ಹನುಮಂತ ದೇವರು ಗುಡಿ, ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 9, 10 – ಹೆಲ್ತ್ ಕ್ಯಾಂಪ್, ಪೊಲೀಸ್ ಕ್ವಾರ್ಟರ್ಸ್, ಕುರಹಟ್ಟಿ ಪೇಟೆ, ಶಿರಹಟ್ಟಿ ಓಣಿ, ಕಬಾಡೆ ರಸ್ತೆ, ತೆಗ್ಗಿನ ಪ್ಲಾಟ್, ತೆಂಗಿನಕಾಯಿ ಬಜಾರ, ಬಸವೇಶ್ವರ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 34, 30 – ವಡ್ಡರಗೇರಿ, ಮೂರುಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಹಾಗೂ ನೀರಿನ ಕರವನ್ನು ತುಂಬಬೇಕೆಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.26ರಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಡಿ. 26ರ ಮುಂಜಾನೆ 9 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಲಕ್ಷ್ಮೇಶ್ವರ ಉಪಕೇಂದ್ರದಿಂದ ಪೂರೈಕೆಯಾಗುವ 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ, 33 ಕೆವ್ಹಿ ಸೊಮೆಶ್ವರ ಸ್ಪಿನ್ನಿಂಗ್ ಮಿಲ್, ವಿನ್ಸಾಲ್ ಸೋಲಾರ್, ಮವ್‌ಯಥೊ ಸೋಲಾರ್, ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## 'ರವಿಯನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ'; ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸೋಮವಾರ ಬಿಜೆಪಿ ಎಂಎಲ್‌ಸಿ ಸಿಟಿ ರವಿ ವಿರುದ್ಧ ಹೋರಾಟ ಮುಂದುವರಿಸಲು ತಮ್ಮ ನಿರ್ಣಯವನ್ನು ಪುನರುಚ್ಚರಿಸಿದರು. ಬಿಜೆಪಿ ಎಂಎಲ್‌ಸಿ ವಿಧಾನಮಂಡಲದ ಅಧಿವೇಶನದಲ್ಲಿ ತಮ್ಮ ವಿರುದ್ಧ ಅವಹೇಳನಕಾರಿ ಪದ ಬಳಸಿದ್ದಾರೆ ಎಂದು ಆರೋಪಿಸಿದ್ದಾರೆ.

### ಗೆಜೆಟೆಡ್ ಪ್ರೊಬೇಷನರ್ ಗ್ರುಪ್ ಎ, ಬಿ ವೃಂದದ ನೇಮಕಾತಿ ಮರುಪರೀಕ್ಷೆ ಕುರಿತ ಸಭೆ

# ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ನಡೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಡಿಸೆಂಬರ್ 29ರಂದು ಕರ್ನಾಟಕ ಲೋಕಸೇವಾ ಆಯೋಗವು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ ಮತ್ತು ಬಿ ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗಾಗಿ ಪೂರ್ವಭಾವಿ ಮರುಪರೀಕ್ಷೆಯನ್ನು ನಡೆಸುತ್ತಿದೆ. ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ಯಾವುದೇ ರೀತಿಯ ಲೋಪದೋಷಗಳಿಗೆ ಆಸ್ಪದ ನೀಡದಂತೆ ಕ್ರಮ ವಹಿಸಲು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಜಿಲ್ಲಾ ಪಂಚಾಯತ್ ವಿಡಿಯೋ ಸಭಾಂಗಣದಲ್ಲಿ ಸೋಮವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 18 ಪರೀಕ್ಷಾ ಕೇಂದ್ರಗಳಲ್ಲಿ ಡಿಸೆಂಬರ್ 29ರಂದು ಪರೀಕ್ಷೆಗಳು ಜರುಗುತ್ತಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ಗೋಡೆ ಗಡಿಯಾರಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿಯನ್ನು, ಮಾರ್ಗಾಧಿಕಾರಿಗಳನ್ನು ಮತ್ತು ತ್ರಿಸದಸ್ಯಸಮಿತಿಯನ್ನು ನೇಮಿಸಲಾಗಿದೆ. ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸೂಚಿಸಿದರು.

ಚಲನವಲನ ವೈಕಲ್ಯವುಳ್ಳ ಅಭ್ಯರ್ಥಿಗಳಿಗೆ ಪರೀಕ್ಷಾ ಕೊಠಡಿಗಳಿಗೆ ತೆರಳಲು ಅನುಕೂಲವಾಗುವಂತೆ ವೀಲ್ ಚೇರ್/ಇಳಿಜಾರು (ರ್‍ಯಾಂಪ್) ಸೌಲಭ್ಯ ಒದಗಿಸಲು ಕ್ರಮ ವಹಿಸಬೇಕು. ಒಟ್ಟಾರೆಯಾಗಿ



ಯಾವುದೇ ಅಕ್ರಮ, ಲೋಪದೋಷಗಳಿಗೆ ಆಸ್ಪದವಿಲ್ಲದಂತೆ ಪರೀಕ್ಷೆಯನ್ನು ಯಶಸ್ವಿಯಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಡಿಸೆಂಬರ್ 29ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಶೂ,ಸಾಕ್ಸ್‌ಗಳನ್ನು ಧರಿಸಲು ಅವಕಾಶವಿರುವುದಿಲ್ಲ. ಸಾಧಾರಣ ಚಪ್ಪಲಿಯನ್ನು ಧರಿಸಿ ಪರೀಕ್ಷೆಗೆ ಹಾಜರಾಗಬೇಕು. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಯಾವುದೇ ಆಧುನಿಕ ಉಪಕರಣಗಳನ್ನು ಒಯ್ಯುವಂತಿಲ್ಲ. ವಸ್ತ್ರಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕಿದ್ದು, ಕರ್ನಾಟಕ ಲೋಕಸೇವಾ ಆಯೋಗವು ನಿಗದಿಪಡಿಸಿರುವ ಸೂಚನೆಗಳನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಅನುಸರಿಸಬೇಕು ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಡಿಸೆಂಬರ್ 29ರಂದು ಬೆ 10ರಿಂದ ಮಧ್ಯಾಹ್ನ 12ರವರೆಗೆ ಹಾಗೂ ಮಧ್ಯಾಹ್ನ 2ರಿಂದ 4ರವರೆಗೆ ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ ಮತ್ತು ಬಿ ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗಾಗಿ ಪೂರ್ವಭಾವಿ ಮರುಪರೀಕ್ಷೆ ಜರುಗಲಿದ್ದು, ಜಿಲ್ಲೆಯ 18 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 5440 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳು ಶಾಂತಿಯುತವಾಗಿ ಹಾಗೂ ಸುಗಮವಾಗಿ ಜರುಗುವಂತೆ ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಪರೀಕ್ಷಾ ಕೇಂದ್ರಗಳ ವಿವರ

ನಗರದ ಕೆ.ಎಲ್.ಇ ಸೊಸೈಟಿ ಜೆ.ಟಿ ಕಾಲೇಜ್, ಬಸವೇಶ್ವರ ಆರ್ಟ್ಸ್ ಮತ್ತು ಕಾಮರ್ಸ್ ಕಾಲೇಜು, ಶಾಸ್ತ್ರೀಜಿ ಹೈಸ್ಕೂಲ್, ವಿ.ಡಿ.ಎಸ್.ಟಿ ಗಂಡುಮಕ್ಕಳ ಪ್ರೌಢಶಾಲೆ, ವಿ.ಡಿ.ಎಸ್.ಟಿ ಹೆಣ್ಣುಮಕ್ಕಳ ಸಂಯುಕ್ತ ಪಿ.ಯು. ಕಾಲೇಜು, ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆ, ಸಿ.ಎಸ್. ಪಾಟೀಲ ಬಾಲಕರ ಪ್ರೌಢಶಾಲೆ, ಲೊಯೊಲ ಹೈಸ್ಕೂಲ್, ಸರಕಾರಿ ಪ್ರಥಮದರ್ಜೆ ಕಾಲೇಜು ಮತ್ತು ಪಿ.ಜಿ. ಸ್ಟಡಿ ಸೆಂಟರ್ ನರಸಾಪುರ, ಎಚ್.ಸಿ.ಇ.ಎಸ್ ಪದವಿಪೂರ್ವ ಕಾಲೇಜು, ಎ.ಎಸ್.ಎಸ್. ಕಾಮರ್ಸ್ ಕಾಲೇಜು, ತೋಂಟದಾರ್ಯ ಕಾಲೇಜ್ ಆಫ್ ಇಂಜಿನಿಯರಿಂಗ್, ಗುರುಬಸವ ಇಂಗ್ಲೀಷ್ ಮಿಡಿಯಂ ಸ್ಕೂಲ್, ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಶಾಲೆ, ಜೆ.ಡಿ.ಶಾ. ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ಶ್ರೀ ಮಹಾವೀರ ಜೈನ್ ಇಂಗ್ಲೀಷ್ ಮಿಡಿಯಂ ಪ್ರೌಢಶಾಲೆ, ಸರಕಾರಿ ಪದವಿಪೂರ್ವ ಕಾಲೇಜು, ಬಸವೇಶ್ವರ ಪ್ರೌಢಶಾಲೆಗಳಲ್ಲಿ ಪರೀಕ್ಷೆ ನಡೆಯಲಿದೆ.

### ಸಿಲಿಂಡರ್ ಸ್ಫೋಟದಲ್ಲಿ ಗಾಯಗೊಂಡವರಿಗೆ ಪರಿಹಾರ: ಶಾಸಕ ಪ್ರಸಾದ್ ಅಬ್ಬಯ್ಯ

# ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೋನಿಯ ಈಶ್ವರ ದೇವಸ್ಥಾನದಲ್ಲಿ ಅಡುಗೆ ಅನಿಲ ಸಿಲಿಂಡರ್ ಸ್ಫೋಟಗೊಂಡು 9 ಅಯ್ಯಪ್ಪ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಪರಿಹಾರ ಒದಗಿಸಲಾಗುವುದು ಎಂದು ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ಬಯ್ಯ ಪ್ರಸಾದ ಭರವಸೆ ನೀಡಿದರು.

ಸೋಮವಾರ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ( ಕೆಎಂಸಿ&ಆರ್‌ಐ)ಗೆ ಭೇಟಿ ನೀಡಿ, ಗಾಯಾಳುಗಳ ಆರೋಗ್ಯ ವಿಚಾರಿಸಿದ ಬಳಿಕ ಪತ್ರಕರ್ತರೊಂದಿಗೆ ಅವರು ಮಾತನಾಡಿ, ಅಯ್ಯಪ್ಪ ಮಾಲಾಧಾರಿಗಳ ಆರೋಗ್ಯದ ಬಗ್ಗೆ ಕೆಎಂಸಿಆರ್‌ಐ ಸಂಸ್ಥೆಯ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ. ಸೂಕ್ತ ರೀತಿಯಲ್ಲಿ ಚಿಕಿತ್ಸೆ ನೀಡುವಂತೆ



ಸೂಚನೆ ನೀಡಲಾಗಿದೆ. ಗಾಯಾಳುಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಪರಿಹಾರ ಒದಗಿಸುವಂತೆ ಖುದ್ದಾಗಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸುತ್ತೇನೆ ಎಂದರು.

ಕೆಎಂಸಿಆರ್‌ಐನಲ್ಲಿ ಐದು ಅಂಬ್ಯುಲೆನ್ಸ್‌ಗಳಿವೆ. ಅಯ್ಯಪ್ಪ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡು ಕೆಎಂಸಿಆರ್‌ಐಗೆ ತೆರಳಲು ಅಂಬ್ಯುಲೆನ್ಸ್ ಒದಗಿಸದೇ ಇರುವುದು ಗಮನಕ್ಕೆ ಬಂದಿದೆ. ಅಲ್ಲದೇ ಅವರಿಗೆ ಸೂಕ್ತ ರೀತಿಯ ಚಿಕಿತ್ಸೆ ನೀಡದೇ ಇರುವುದರ ಬಗ್ಗೆ ಮಾಹಿತಿ ಪಡೆದಿದ್ದೇನೆ. ಗಾಯಾಳುಗಳಿಗೆ ಸ್ಪಂದಿಸದಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಪೊಲೀಸ್ ಆಯುಕ್ತರಾದ ಎನ್. ಶಶಿಕುಮಾರ್, ಡಿಸಿಪಿಗಳಾದ ಮಹಾನಿಂಗ ನಂದಗಾವಿ, ರವೀಶ್ ಸಿ.ಆರ್., ಕೆಎಂಸಿಆರ್‌ಐ ನಿರ್ದೇಶಕ ಡಾ. ಎಸ್.ಎಫ್. ಕಮ್ಮಾರ ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.

## ಇಸ್ತಿಮಾದಲ್ಲಿ ಗೋಹತ್ಯೆಗೆ ಅವಕಾಶ ಕೊಡಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿಯಲ್ಲಿ ಇದೇ ಡಿ. 29 ಮತ್ತು 30 ರಂದು ನಡೆಯುವ ಮುಸ್ಲಿಂ ಸಮಾಜದ ಜಿಲ್ಲಾಮಟ್ಟದ ಇಸ್ತಿಮಾದಲ್ಲಿ ಗೋಹತ್ಯೆ ಹಾಗೂ ಹಿಂದೂ ದೇವರ ಅವಹೇಳನವನ್ನು ಸಹಿಸುವುದಿಲ್ಲ ಎಂದು ಶ್ರೀರಾಮಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಎಚ್ಚರಿಸಿದರು.

ಸೋಮವಾರ ಇಲ್ಲಿನ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಸ್ಲಿಂ ಸಮಾಜದವರು ನಡೆಸುವ ಧರ್ಮಸಭೆಗೆ ನಮ್ಮ ವಿರೋಧ ಇಲ್ಲ. ಆದರೆ ಆ ಧರ್ಮಸಭೆಯಲ್ಲಿ ಹಿಂದೂ ದೇವರನ್ನು ಅವಹೇಳನ ನಾಡುವುದು, ನೂರಾರು ಗೋವುಗಳನ್ನು ಹತ್ಯೆ ಮಾಡುವುದು ಸರಿಯಲ್ಲ. ಮುಂಡರಗಿಯಲ್ಲಿ ನಡೆಯುವ ಇಸ್ತಿಮಾದಲ್ಲಿ ಗೋಹತ್ಯೆ ನಡೆದರೆ ಶ್ರೀರಾಮ ಸೇನೆ ಕಾರ್ಯಕರ್ತರು ಆ ಸಭೆಗೆ ನುಗ್ಗಿ ಗೋಹತ್ಯೆಯನ್ನು ತಡೆಯಲಾಗುವುದು. ಆ ಸಮಯದಲ್ಲಿ ಆಗುವ ಅವಘಡಗಳಿಗೆ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆಯೇ ಹೊಣೆ ಎಂದರು.

ಗೋವು ನಮ್ಮ ಮಾತೆ. ಆ ಮಾತೆಯನ್ನ ಆಹಾರ ಪದ್ಧತಿ ಹೆಸರಿನಲ್ಲಿ ಕೊಲ್ಲಲಾಗುತ್ತಿದೆ. ಗೋವು ಹತ್ಯೆ ತಡೆಯುವ ಹಿಂದೂ ಕಾರ್ಯಕರ್ತರ ಮೇಲೆ ಕೇಸ್ ದಾಖಲಿಸಲಾಗುತ್ತದೆ. ಆದರೆ ಮುಸ್ಲಿಮರು ಅಕ್ರಮವಾಗಿ ಗೋವು ಸಾಗಾಟ, ಹತ್ಯೆ ಮಾಡಿದರೂ ಪೊಲೀಸರು ಮೌನವಾಗಿರುತ್ತಾರೆ. ಪ್ರತಿ ಬಾರಿ ಪೊಲೀಸರು, ಗೋರಕ್ಷಣೆ ಮಾಡುವ ಹಿಂದೂ ಸಂಘಟನೆಗಳ ಕಾರ್ಯಕರ್ತರಿಗಷ್ಟೆ ಕಾನೂನಿನ ಪಾಠ ಮಾಡುತ್ತಾರೆ. ಮುಸ್ಲಿಂ ಸಮಾಜದ ಜನರಿಗೂ ಕಾನೂನಿನ ಪಾಠ ಮಾಡಬೇಕು. ಕಾನೂನು ಎಲ್ಲರಿಗೂ ಒಂದೇ ಎನ್ನುವುದನ್ನು ಪೊಲೀಸರು ಮನವರಿಕೆ ಮಾಡಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಶ್ರೀರಾಮ ಸೇನೆ ಮುಖಂಡರಾದ ಸೋಮು ಗುಡಿ, ಸುದೀಪ ಗಡಾದ, ಶಿವಯ್ಯ ಹಿರೇಮಠ, ಸತೀಶ ಕುಂಬಾರ ಮಲ್ಲಿಕಾರ್ಜುನ ಹಿರೇಮಠ, ಕಿರಣ ಹಿರೇಮಠ, ಮಲ್ಲಿಕಾರ್ಜುನ ಹಂದ್ರಾಳ ಇತರರು ಉಪಸ್ಥಿತರಿದ್ದರು.




### ಗೋರಕ್ಷಣೆ ಹೆಸರಿನಲ್ಲಿ

ಗದಗ ಬೆಟಗೇರಿ ಅವಳಿ ನಗರದಲ್ಲಿ 18ನೇ ವಾರ್ಡಿನ ನಗರಸಭೆ ಕಾಂಗ್ರೆಸ್ ಸದಸ್ಯ ನಮಾಜಿ ಹಾಗೂ ಕೆಲ ರೌಡಿಗಳು ರಾತ್ರೋರಾತ್ರಿ ಬಿಡಾಡಿ ದನಗಳನ್ನು ಗೋಶಾಲೆಗೆ ಸೇರಿಸುವ ನೆಪದಲ್ಲಿ ಹಾವೇರಿಗೆ ಸಾಗಾಟ ಮಾಡಿ, ಗೋರಕ್ಷಣೆ ಹೆಸರಿನಲ್ಲಿ ಗೋಸಾಗಾಟ ಮಾಡಿದ್ದಾರೆ. ಪೊಲೀಸ್ ಇಲಾಖೆಯ ಸಿಸಿಟಿವಿಯಲ್ಲಿ ನಗರಸಭೆ ಸದಸ್ಯರ ಗೋಸಾಗಾಟ ಅಕ್ರಮದ ದಾಖಲೆಗಳು ಸಿಗುತ್ತವೆ. ಆದರೂ ಪೊಲೀಸರು ಗೋರಕ್ಷಣೆ ವಿಷಯದಲ್ಲಿ ಉದಾಸೀನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

## ಶಾ ಹೇಳಿಕೆ ಖಂಡಿಸಿ ಇಂದು ಗದಗ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಅಂಬೇಡ್ಕರ್ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ಖಂಡಿಸಿ, ದಲಿತ ಸಂಘಟನೆಗಳ ಒಕ್ಕೂಟ ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಡಿ. 24 ರಂದು ಗದಗ ಬಂದ್ ಕರೆ ನೀಡಲಾಗಿದೆ.

ಸೋಮವಾರ ಇಲ್ಲಿನ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ, ದಸಂಸ, ಅಲ್ಪಸಂಖ್ಯಾತ ಸಂಘಟನೆಗಳ ಒಕ್ಕೂಟ, ರೈತ, ಕಾರ್ಮಿಕ, ಕಟ್ಟಡ ಕಾರ್ಮಿಕ, ಬಸವದಳ, ಕನ್ನಡಪರ ಸಂಘಟನೆಗಳ ಮುಖಂಡರು, 100ಕ್ಕೂ ಹೆಚ್ಚು ಸಂಘ ಸಂಸ್ಥೆಗಳ ಸಹಯೋಗದಲ್ಲಿ ಬಂದ್ ಕರೆ ನೀಡಲಾಗಿದೆ ಎಂದರು.

ಬೆಳಗ್ಗೆ 6 ರಿಂದ ಸಂಜೆ 6 ರ ವರೆಗೆ ಈ ಬಂದ್ ನಡೆಯಲಿದೆ. 11 ಗಂಟೆಗೆ ಮಹಾತ್ಮ ಗಾಂಧಿ ವೃತ್ತದಲ್ಲಿ ಬಹಿರಂಗ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಬಂದ್ ಶಾಂತಿಯುತವಾಗಿ ನಡೆಯಲಿದೆ. ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡುವಂತೆ ಯಾರಿಗೂ ಒತ್ತಾಯ ಮಾಡಿಲ್ಲ. ಆದರೆ ಕಾರ್ಮಿಕರು, ವ್ಯಾಪಾರಸ್ಥರು ಸ್ವಯಂಪ್ರೇರಿತರಾಗಿ ಬಂದ್‌ಗೆ ಬೆಂಬಲ ಸೂಚಿಸಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ನಿಸಾರ್ ಅಹ್ಮದ್ ಖಾಜಿ, ಚಂದ್ರು ಚವ್ಹಾಣ, ವಿಜಯ ಕಲ್ಮನಿ, ವಿಜಯ ಮುಳಗುಂದ, ಶರೀಫ್ ಬಿಳೆಯಲಿ, ಬಾಲರಾಜ ಅರಬರ, ಎಮ್ ಐ ನವಲೂರ, ಮಂಜುನಾಥ್ ಮುಳಗುಂದ, ನಾಗರಾಜ ಗೋಕಾವಿ, ಗಣೇಶ ಹುಬ್ಬಳ್ಳಿ, ಶಿವಣ್ಣ ತಮ್ಮಣ್ಣವರ, ಆನಂದ ಸಿಂಗಾಡಿ ಇತರರು ಉಪಸ್ಥಿತರಿದ್ದರು.




> ಅಂಬೇಡ್ಕರ್ ಬಗ್ಗೆ ಕೇಂದ್ರ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡನೀಯ. ಅದರ ಜೊತೆ-ಗೆ ಅಂಬೇಡ್ಕರ್ ಅವರ ಹೆಸರನ್ನು ಯಾರೇ ದುರ್ಬಳಕೆ ಮಾಡಿಕೊಂಡರೂ ಸಹಿಸಿಕೊಳ್ಳುವುದಿಲ್ಲ.
>
> – ವಿಜಯ ಮುಳಗುಂದ, ದಲಿತ ಮುಖಂಡ

## ಸಾಕ್ಷಿ ಸುಭಾಷಿತ

**ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ**

**–ಸುಭಾಷಿತ**

## ಸಂಪಾದಕೀಯ

# ಭವಿಷ್ಯದಲ್ಲಾದರೂ ಸಾಹಿತ್ಯ ಸಮ್ಮೇಳನ ಅರ್ಥಪೂರ್ಣವಾಗಲಿ

ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತೆರೆ ಬಿದ್ದಿದೆ. ಈ ಹಿಂದಿನಂತೆ ಮಂಡ್ಯದಲ್ಲಿ ನಡೆದ ಸಾಹಿತ್ಯ ಸಮ್ಮೇಳನ ಟೀಕೆ ಟಿಪ್ಪಣಿ, ಗದ್ದಲ ಗಲಾಟೆಯಲ್ಲಿಯೇ ಮುಕ್ತಾಯ ಕಂಡಿತು.

ಪ್ರತಿ ಬಾರಿ ನಡೆಯುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಒಂದಿಲ್ಲೊಂದು ಕಾರಣಕ್ಕೆ ವಿವಾದ ಆವರಿಸಿಕೊಳ್ಳುತ್ತದೆ. ಕಳೆದ ಒಂದೂವರೆ ದಶಕದಿಂದ ಈಚೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ನಡೆಯುವ ಸಾಹಿತ್ಯ ಸಮ್ಮೇಳನ ವಿವಾದದ ಕೇಂದ್ರ ಬಿಂದುವಾಗುತ್ತಲೇ ಸಾಗಿದೆ.

ಸಮ್ಮೇಳನ ಅಧ್ಯಕ್ಷರ ಆಯ್ಕೆಯಿಂದ ಹಿಡಿದು ಸಮ್ಮೇಳನದ ಊಟದವರೆಗೂ ಒಂದಿಲ್ಲೊಂದು ಕಾರಣಕ್ಕೆ ಸಮ್ಮೇಳನ ಚರ್ಚೆಗೆ ಗ್ರಾಸವಾಗುತ್ತಲೇ ಇದೆ. ಆದರೆ ಈ ಬಾರಿ, ಊಟದ ವಿಚಾರವಾಗಿ ಮಂಡ್ಯ ಸಾಹಿತ್ಯ ಸಮ್ಮೇಳನ ಹೆಚ್ಚು ಚರ್ಚೆಗೆ ಒಡ್ಡಿಕೊಂಡಿತು.

ಊಟದ ಹೊರತಾಗಿಯೂ ಮಂಡ್ಯದಲ್ಲಿ ನಡೆದ ಸಾಹಿತ್ಯ ಸಮ್ಮೇಳನ ಆಯೋಜನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಎಡವಿದ್ದು ಸ್ಪಷ್ಟವಾಗಿದೆ. ಮುಖ್ಯ ವೇದಿಕೆ ಹೊರತುಪಡಿಸಿದರೆ, ಸಮಾನಾಂತರ ವೇದಿಕೆಗಳಲ್ಲಿ ನಡೆದ ವಿಚಾರಗೋಷ್ಠಿಗಳಿಗೆ ಜನರ ಕೊರತೆ ಕಾಡಿತು. ಕವಿಗೋಷ್ಠಿಗೆ ವೇದಿಕೆ ಮೇಲಿದ್ದವರಿಗಿಂತ ಸಭಿಕರ ಸಂಖ್ಯೆ ಕಡಿಮೆಯಾಗಿದ್ದು, ಕಾವ್ಯ ಗೋಷ್ಠಿ ಮಹತ್ವ ಕಳೆದುಕೊಳ್ಳುತ್ತಿರುವುದಕ್ಕೆ ಸಾಕ್ಷಿಯಾಗಿದೆ.

ಇನ್ನು ಸಮ್ಮೇಳನದಲ್ಲಿ ಕೈಗೊಳ್ಳುವ ನಿರ್ಣಯಗಳು ಯಾವ ಕಾಲಕ್ಕೂ ಜಾರಿಯಾಗುವುದಿಲ್ಲ. ಪ್ರತಿ ಸಮ್ಮೇಳನದಲ್ಲೂ ಕನಿಷ್ಠ ನಾಲ್ಕರಿಂದ ಐದು ನಿರ್ಣಯಗಳನ್ನು ಕೈಗೊಳ್ಳಲಾಗುತ್ತದೆ. ಆದರೆ ಐದು ವರ್ಷವಾದರೂ ಆ ನಿರ್ಣಯಗಳು ಜಾರಿಯಾಗುವುದಿಲ್ಲ. ಸಮ್ಮೇಳನದಲ್ಲಿ ನಿರ್ಣಯ ಕೈಗೊಳ್ಳುವುದು ಎಂದರೆ ಅದೊಂದು ಸಂಪ್ರದಾಯ ಎನ್ನುವಂತಾಗಿದೆ.

ಈ ಎಲ್ಲ ಕಾರಣಗಳಿಗಾಗಿ ಭವಿಷ್ಯದ ಸಮ್ಮೇಳನ ಯಾವ ರೀತಿ ಆಯೋಜಿಸಬೇಕು ಎನ್ನುವ ಕುರಿತು ಚಿಂಥನ ಮಂಥನ ನಡೆಯಬೇಕು. 88ನೇ ಸಾಹಿತ್ಯ ಸಮ್ಮೇಳನ ನಡೆಯುವುದಕ್ಕೂ ಮುಂಚೆ, ಭವಿಷ್ಯದಲ್ಲಿ ಸಾಹಿತ್ಯ ಸಮ್ಮೇಳನ ಯಾವ ರೀತಿ ನಡೆಯಬೇಕು, ಆಯೋಜಿಸಬೇಕು ಎನ್ನುವ ಬಗ್ಗೆ ಹೆಚ್ಚು ಗಮನಹರಿಸಿದರೂ ಸಾಹಿತ್ಯ ಸಮ್ಮೇಳನಕ್ಕೆ ಅರ್ಥ ಬರಲಿದೆ.

## ಗಣರಾಜ್ಯೋತ್ಸವ ಪರೇಡ್‌ನಲ್ಲಿ ಲಕ್ಕುಂಡಿಯ ಶಿಲ್ಪಕಲೆಯ ಸ್ತಬ್ಧ ಚಿತ್ರ ಅನಾವರಣ

# ಲಕ್ಕುಂಡಿಯ ಬ್ರಹ್ಮ ಜಿನಾಲಯ ವೈಭವ



ಜಿಲ್ಲೆಯ ಐತಿಹಾಸಿಕ, ಪಾರಂಪರಿಕ ಲಕ್ಕುಂಡಿಯು ವಿವಿಧ ಶಿಲ್ಪಕಲೆ, ವಾಸ್ತುಶಿಲ್ಪ ಹೊಂದಿರುವ ದೇವಾಲಯಗಳನ್ನು ಒಳಗೊಂಡಿದ್ದು, ಸಾಂಸ್ಕೃತಿಕ, ಐತಿಹಾಸಿಕ, ಶಿಲ್ಪಕಲಾ ನೈಪುಣ್ಯತೆಗೆ ತನ್ನದೇ ಆದ ಛಾಪು ಮೂಡಿಸಿದೆ. ಬರುವ 2025ರ ಜನೇವರಿ 26ರಂದು ಜರುಗುವ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಕರ್ನಾಟಕ ರಾಜ್ಯದಿಂದ ಐತಿಹಾಸಿಕ ಲಕ್ಕುಂಡಿಯ ಬ್ರಹ್ಮಜಿನಾಲಯದ ಸ್ತಬ್ಧಚಿತ್ರವು ಆಯ್ಕೆಯಾಗಿದೆ. ದೆಹಲಿಯ ಕರ್ತವ್ಯಪಥದಲ್ಲಿ ನಡೆಯುವ ಪರೇಡ್‌ನಲ್ಲಿ ಬ್ರಹ್ಮ ಜಿನಾಲಯ ದೇವಾಲಯ ಆಯ್ಕೆ ಆಗಿದ್ದು ಲಕ್ಕುಂಡಿಯ ಶಿಲ್ಪಕಲಾ ವೈಭವವನ್ನು ಮತ್ತೆ ನೆನಪಿಸುತ್ತದೆ. ಲಕ್ಕುಂಡಿ ದೇವಾಲಯಗಳ ಶಿಲ್ಪಕಲೆಯು ಅಭೂತಪೂರ್ವ ಇತಿಹಾಸವನ್ನು ಹೊಂದಿದ್ದು, ಕಲಾಸಕ್ತರ ಕಣ್ಮನ ಸೆಳೆಯುತ್ತದೆ.

ಬ್ರಹ್ಮಜಿನಾಲಯ ದೇವಾಲಯ ಕ್ರಿ.ಶ 11ನೇ ಶತಮಾನದ್ದಾಗಿದ್ದು, ಪೂರ್ವಾಭಿಮುಖವಾಗಿ ಗರ್ಭಗುಡಿ, ಅಂತರಾಳ, ಗೂಢಮಂಟಪ, ಅಗ್ರಮಂಟಪ, ತಲವಿನ್ಯಾಸ ಹೊಂದಿರುವ, ಕಪ್ಪು ಶಿಲೆಯಿಂದ ರಚನೆಗೊಂಡಿದೆ. ಚೌಕಾಕಾರದ ಗರ್ಭಗೃಹದ ಮಧ್ಯದಲ್ಲಿ ಎತ್ತರವಾದ ಸಿಂಹಪೀಠದ ಮೇಲೆ ತೀರ್ಥಂಕರನ ಶಿಲ್ಪವಿದೆ. ಇಕ್ಕೆಲದಲ್ಲಿ ಇಬ್ಬರು ಚಾಮರಧಾರಿಗಳಿದ್ದಾರೆ.

ಪೀಠದ ಸುತ್ತಲೂ ಮಕರ ತೋರಣದ ಅಲಂಕರಣೆಯಿದ್ದು, ರತ್ನತ್ರಯರ ಪ್ರತೀಕವಾದ ಮುಕ್ಕೊಡೆಯಿದೆ. ತೀರ್ಥಂಕರನನ್ನು ಈಗ ಸದ್ಯದಲ್ಲಿ ನೇಮಿನಾಥ ಎಂದು ಕರೆಯುತ್ತಿದ್ದಾರೆ. ವಿತಾನವು ಸಮತಲವಾಗಿದೆ. ದ್ವಾರಬಂಧವು ಪಂಚಶಾಖಾ ರೀತಿಯದಾಗಿದ್ದು, ಅವು ಕ್ರಮವಾಗಿ ರತ್ನಶಾಖಾ, ರೂಪಶಾಖ, ಸ್ತಂಭಶಾಖಾ, ಸಿಂಹಶಾಖಾ ಮತ್ತು ಪತ್ರಶಾಖಾ ಆಗಿವೆ. ಲಲಾಟಪಟ್ಟಿಕೆಯಲ್ಲಿ ತೀರ್ಥಂಕರನ ಉಬ್ಬುಶಿಲ್ಪವಿದೆ. ಹಂಸಗಳ ಸಾಲು ಇದೆ. ಪೇದ್ಯಾ ಭಾಗದಲ್ಲಿ ಗಂಗಾ, ರತಿ ಕಾಮ ಹಾಗೂ ದ್ವಾರಪಾಲರ ಶಿಲ್ಪಗಳಿವೆ. ಉತ್ತರಾಂಗದ ಮೇಲೆ ಪದ್ಮಾವತಿಯಕ್ಷಿಯ ಉಬ್ಬುಶಿಲ್ಪವಿದೆ.

ಗರ್ಭ ಗೃಹಕ್ಕೆ ಹೊಂದಿಕೊಂಡು ಅಂತರಾಳವಿದ್ದು, ಮೂಲೆಗಳಲ್ಲಿ ಅರ್ಧಗಂಬಗಳಿವೆ. ಮುಂಭಾಗದಲ್ಲಿ ಎರಡು ಭದ್ರಕ ರೀತಿಯ ಸ್ತಂಭಗಳಿವೆ. ವಿತಾನವು ಸಮತಲವಾಗಿದೆ. ಅಂತರಾಳಕ್ಕೆ ಹೊಂದಿಕೊಂಡಂತೆ ಗೂಢಮಂಟಪವಿದೆ. ಮಧ್ಯದಲ್ಲಿ ನಾಲ್ಕು ಸ್ವತಂತ್ರ ಶ್ರೀಕಾರ ಸ್ತಬ್ಧಗಳಿದ್ದು ಪೀಠ, ಓಮ, ಕಾಂಡ ಮಾಲಾಸ್ಥಾನ, ಕುಂಭ, ಕಲಶ, ಫಲಕ ಮತ್ತು ಬೋದಿಗೆ ಭಾಗಗಳನ್ನು ಹೊಂದಿವೆ. ಇಕ್ಕೆಲದಲ್ಲಿ ಚತುರ್ಮುಖ ಬ್ರಹ್ಮ, ಮತ್ತು ಪದ್ಯಾವತಿಯಕ್ಷಿಯ ಶಿಲ್ಪಗಳಿವೆ. ಸಮತಲ ವಿತಾನದ ಮಧ್ಯದಲ್ಲಿ ಉಬ್ಬು ಅಲಂಕಾರವಿದೆ. ಸ್ತಂಭಗಳ ಪೀಠ ಭಾಗದಲ್ಲಿ ದರ್ಪಣ ಸುಂದರಿ, ನರ್ತಕಿ, ತಾಯಿ ಮತ್ತು ಮಗು ಕೊಳಲು ನುಡಿಸುವ ಸ್ತ್ರೀಯ ಉಬ್ಬು ಶಿಲ್ಪಗಳನ್ನು ಕಂಡರಿಸಲಾಗಿದೆ. ದ್ವಾರಬಂಧವು ಪಂಚಶಾಖಾ ರೀತಿಯದಾಗಿದ್ದು, ಅವು ಕ್ರಮವಾಗಿ ರತ್ನಶಾಖಾ, ರೂಪಶಾಜಾ, ಸಂಭಶಾಖಾ, ಸಿಂಹಶಾಖಾಖಾ ಮತ್ತು ಪತ್ರಶಾಖ ಆಗಿವೆ.

ಲಲಾಟ ಚಿಟ್ಟಿಕೆಯಲ್ಲಿ, ಗಜಲಕ್ಷ್ಮೀಯ ಉಬ್ಬು ಶಿಲ್ಪವಿದೆ. ಉತ್ತರಾಂಗದಲ್ಲಿ ಹಂಸಗಳ ಸಾಲು, ಪೇದ್ಯಾಭಾಗದಲ್ಲಿ ಆರೋಕ್ಷ ಗಂಗಾ, ರತಿ–ಕಾಮ, ಧರಣೇಂದ್ರ ಹಾಗೂ ದ್ವಾರಪಾಲರ ಶಿಲ್ಪಗಳಿವೆ. ದ್ವಾರ ಬಂಧದ ಉದುಂಬರಕ್ಕೆ ಹೊಂದಿಕೊಂಡು ಮುಂದುಗಡೆ ಪದ್ಮಾಲಂಕಾರದ ಚಂದ್ರಶಿಲಾ ರಚನೆಯಿದೆ.

ಗೂಡಮಂಟಪಕ್ಕೆ ಹೊಂದಿಕೊಂಡು ಅಗ್ರಮಂಟಪವಿದೆ. ಇಲ್ಲಿ ಒಟ್ಟು 28 ಸ್ತಂಭಗಳಿವೆ. ಅಗ್ರಮಂಟಪದ ಸುತ್ತಲೂ ಕಕ್ಷಾಸನವಿದ್ದು, ಕಕ್ಷಾಸನದ ಮೇಲ್ಭಾಗದಲ್ಲಿ ಇಳಿಜಾರದ ಚಜ್ಜುದಾಗ ಇದೆ. ಕಕ್ಷಾಸನದ ಸುತ್ತಲೂ ಚಿಕ್ಕ ಚಿಕ್ಕ ಭದ್ರಕ ರೀತಿಯ ಸ್ತಂಭಗಳಿವೆ. ಮಧ್ಯದಲ್ಲಿರುವ ನಾಲ್ಕು ಶ್ರೀಕರ ಸ್ತಂಭಗಳು, ಪೀಠ, ಓಮ ಕಾಂಡ ಮಾಲಾಸ್ನಾನ, ಕಲಶ, ಫಲಕ ಮತ್ತು ಬೋದಿಗೆ ಭಾಗಗಳನ್ನು ಹೊಂದಿವೆ. ಅಗ್ರ ಮಂಟಪವನ್ನು ಪ್ರವೇಶಿಸಲು ಸೋಪಾನಗಳಿದ್ದು, ಪಕ್ಕದಲ್ಲಿ ಯಾಳಿ ರೀತಿಯ ಹಸ್ತಿಹಸ್ತವಿದೆ.

ಈ ಬಸದಿಯ ಕಪೋತ ಬಂಧ, ಅಧಿಸ್ಠಾನವನ್ನು ಹೊಂದಿದ್ದು, ಅದಕ್ಕೆ ಕ್ರಮವಾಗಿ ಖುರಕ ಪದ್ಮ ಅಂತರಿತ, ತ್ರಿಪಟ್ಟ ಕುಮುದ, ಅಂತರೀತ, ಕಪೋತ ಮತ್ತು ಮಕರ ಪಟ್ಟಿಕೆ ಭಾಗಗಳಿವೆ. ಮಕರ ಪಟ್ಟಿಕೆಯಲ್ಲಿ ಪ್ರಾಣಿಗಳ ಮತ್ತು ಕೀರ್ತಿಮುಖಗಳ ಅಲಂಕಾರವಿದೆ ಹಾಗೂ ಕಪೋತದ ಮೇಲೆ ನಾಸಿಗಳ ಅಲಂಕಾರವಿದೆ.


ಭಿತ್ತಿಯು ಕುಡ ಸ್ತಂಭ ಪಂಜರ ಮತ್ತು ಕೋಷ್ಠ ಪಂಜರಗಳನ್ನು ಹೊಂದಿದೆ. ಸಲಿಲಾಂತರಗಳಲ್ಲಿ ಸ್ತಂಭ ಪಂಜರಗಳಿದ್ದು, ಅವುಗಳ ಮೇಲೆ ದ್ರಾವಿಡ ಮಾದರಿಯ ಶಿಖರದ ಪ್ರತಿಕೃತಿಗಳಿವೆ. ಅದರ ಮೇಲೆ ಮಕರತೋರಣವಿದೆ. ಕೂಟ (ಮೂಲೆ)ದಲ್ಲಿ ಕೋಷ್ಠ ಪಂಜರಗಳಿದ್ದು, ಅವುಗಳ ಮೇಲೆ ದ್ರಾವಿಡ ಶಿಖರದ ಪ್ರತಿಕೃತಿಗಳಿವೆ. ಭಿತ್ತಿಯ ಮೇಲ್ಭಾಗದಲ್ಲಿ ಕಪೋತವಿದ್ದು, ಅದರ ಮೇಲೆ ನಾಸಿಗಳ ಅಲಂಕಾರವಿದೆ.

ಗರ್ಭಗೃಹದ ಮೇಲಿನ ಶಿಖರವು ಚತುಸ್ಕಲ ನಾಲ್ಕು, ದ್ರಾವಿಡ ಮಾದರಿಯದಾಗಿದೆ. ಮೊದಲನೆಯ ಮಹಡಿಯಲ್ಲಿ ಹಾರವು ಕೂಟ, ಪಂಜರ ಶಾಲಾಗಳಿಂದ ಕೂಡಿದೆ ಕಪೋತದ ಮೇಲೆ ವೇದಿಕಾ ಇದೆ. ಕೂಟ ಮತ್ತು ಪಂಜರಗಳಲ್ಲಿ ಕೀತಿ ಮುಖಗಳ ಅಲಂಕಾರವಿದೆ. ಶಾಲಾದಲ್ಲಿ ಜಿನಬಿಂಬಗಳನ್ನು ಮತ್ತು ಶಿವ ಸೂರ್ಯನ ಶಿಲ್ಪಗಳನ್ನು ಕಂಡರಿಸಲಾಗಿದೆ. ಎರಡು ಮತ್ತು ಮೂರನೆಯ ಮಹಡಿಗಳಲ್ಲಿಯೂ ಇದೇ ರೀತಿಯ ಹಾರದ ಅಲಂಕಾರವಿದೆ. ಮೇಲ್ಭಾಗದಲ್ಲಿ ಘಂಟಾ ಕಲಶವಿದೆ. ಶಿಖರದ ಮುಂಭಾಗದಲ್ಲಿಯ ಶುಕನಾಸಿಯು ಗವಾಕ್ಷದ ಆಲಂಕಾರದಿಂದ ಕೂಡಿದ್ದು, ಮಧ್ಯದಲ್ಲಿ ಅದರ ಮೇಲೆ ಕೀರ್ತಿ ಮುಖವಿದೆ.

> 2025ರ ದೆಹಲಿಯ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಕರ್ನಾಟಕ ರಾಜ್ಯದ ಪರವಾಗಿ ಐತಿಹಾಸಿಕ ಲಕ್ಕುಂಡಿಯ ಬ್ರಹ್ಮ ಜಿನಾಲಯದ ಟ್ಯಾಬ್ಲೋ ಆಯ್ಕೆಯಾಗಿ ಲಕ್ಕುಂಡಿಯ ಐತಿಹಾಸಿಕ ಶೀಮಂತಿಕೆ ಅನಾವರಣಕ್ಕೆ ಅವಕಾಶ ಕಲ್ಪಿಸಿದ ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ವಾರ್ತಾ ಇಲಾಖೆ ಸೇರಿದಂತೆ ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಶಾಸಕರಾದ ಸಿ.ಸಿ ಪಾಟೀಲ ಅವರುಗಳಿಗೆ ಹಾಗೂ ಜಿಲ್ಲಾಡಳಿತಕ್ಕೆ ಹಾರ್ದಿಕ ಅಭಿನಂದನೆಗಳು.
>
> – ಡಾ. ಶರಣು ಗೋಗೇರಿ,
> ಆಯುಕ್ತರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಗದಗ.



# ಗ್ರಾ.ಪಂ ಅಧ್ಯಕ್ಷರು, ಪಿಡಿಓಗಳಿಗೆ ಕಾರ್ಯಾಗಾರ





**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಇಲ್ಲಿನ ತಾ.ಪಂ ರಾಜೀವಗಾಂಧಿ ಸಭಾಂಗಣದಲ್ಲಿ ಗ್ರಾ.ಪಂ ಅಧ್ಯಕ್ಷರು ಮತ್ತು ಪಿಡಿಓಗಳಿಗೆ ಹಮ್ಮಿಕೊಂಡಿದ್ದ ಭಾರತೀಯ ಮಾನದಂಡಗಳ ಬಳಕೆಯ ಅರಿವು ಮೂಡಿಸುವ ತರಬೇತಿ ಕಾರ್ಯಾಗಾರಕ್ಕೆ ತಾ.ಪಂ ಇಓ ವೈ.ಎಚ್. ಚಂದ್ರಶೇಖರ್ ಚಾಲನೆ ನೀಡಿದರು.

ಭಾರತೀಯ ಮಾನ 'ದಂಡಗಳ ಬಳಕೆಯ ಕುರಿತು ಬೆಂಗಳೂರಿನ ಭಾರತೀಯ ಮಾನಕ ಬ್ಯುರೋ ಸಂಪನ್ಮೂಲ ವ್ಯಕ್ತಿ ಮಧುಸೂಧನ್ ತರಬೇತಿ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾದ ಶಿವಕುಮಾರ್, ತಾ.ಪಂ ಸಹಾಯಕ ಲೆಕ್ಕಾಧಿಕಾರಿ ವಿಜಯಕುಮಾರ್, ಗ್ರಾ.ಪಂ ಅಧ್ಯಕ್ಷರು, ಪಿಡಿಓಗಳು ತರಬೇತಿಯಲ್ಲಿ ಭಾಗಿಯಾಗಿದ್ದರು.

# 88ನೇ ಸಾಹಿತ್ಯ ಸಮ್ಮೇಳನ ಬಳ್ಳಾರಿಯಲ್ಲಿ



**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಗಡಿನಾಡು ಬಳ್ಳಾರಿಯಲ್ಲಿ ಆಯೋಜಿಸಲು ಕನ್ನಡ ಸಾಹಿತ್ಯ ಪರಿಷತ್ತಿನ ಸಭೆಯಲ್ಲಿ ನಿರ್ದರಿಸಲಾಗಿದೆ ಎಂದು ಅಖಂಡ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ತಿಳಿಸಿದರು.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಬಳ್ಳಾರಿ, ಕೋಲಾರ, ಯಾದಗಿರಿ, ಚಿಕ್ಕಮಗಳೂರು, ದೆಹಲಿಯಲ್ಲಿ ಸಮ್ಮೇಳನ ನಡೆಸುವ ಕುರಿತು ಚರ್ಚೆಗಳು ಸಾಗಿದ್ದವು. ಅದರೆ ಅಂತಿಮವಾಗಿ ಮುಂದಿನ ಸಾಹಿತ್ಯ ಸಮ್ಮೇಳನ ಬಳ್ಳಾರಿಯಲ್ಲಿ ನಡೆಸಲು ಅವಿರೋಧವಾಗಿ ತೀರ್ಮಾನಿಸಿರುವುದು ಸಂತಸ ತಂದಿದೆ ಎಂದರು.

1926 ಹಾಗೂ 1938ರಲ್ಲಿ ಬಳ್ಳಾರಿಯಲ್ಲಿ ಸಮ್ಮೇಳನ ನಡೆದಿತ್ತು. ಸ್ವಾತಂತ್ರ್ಯಾನಂತರ 1958ರಲ್ಲಿ ವಿ.ಕೃ. ಗೋಕಾಕ ಅವರ ಅಧ್ಯಕ್ಷತೆಯಲ್ಲಿ ಬಳ್ಳಾರಿಯ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಸಮ್ಮೇಳನ ಅರ್ಥಪೂರ್ಣವಾಗಿ ನಡೆದಿತ್ತು. ಸುದೀರ್ಘ 66 ವರ್ಷಗಳ ಬಳಿಕ ಬಳ್ಳಾರಿಗೆ ಸಾಹಿತ್ಯ ಸಮ್ಮೇಳನದ ಅವಕಾಶ ದಕ್ಕಿದ್ದು, ಸಮ್ಮೇಳನ ನಡೆಸಲು ಅವಕಾಶ ಮಾಡಿಕೊಟ್ಟ ಕಸಾಪ ರಾಜ್ಯಾಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ಮತ್ತು ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಅಭಿನಂದನೆಗಳನ್ನು ತಿಳಿಸಿದರು.

ಕಸಾಪ ತಾಲೂಕು ಅಧ್ಯಕ್ಷ ಕೆ.ಉಚ್ಚಂಗೆಪ್ಪ ಮಾತನಾಡಿ, ಗಡಿನಾಡಿನಲ್ಲಿ ಕನ್ನಡವನ್ನು ಜಾಗೃತವಾಗಿ ಇರಿಸುವ ನಿಟ್ಟಿನಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಬಳ್ಳಾರಿ ಜಿಲ್ಲೆಯಲ್ಲಿ ಹಮ್ಮಿಕೊಂಡಿರವುದು ಸೂಕ್ತವಾಗಿದೆ. 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ಜರುಗಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಹರಿಹರ ತಾಲೂಕು ಕಸಾಪ ಅಧ್ಯಕ್ಷ ಮಂಜುನಾಥಯ್ಯ, ಹರಪನಹಳ್ಳಿ ತಾಲೂಕು ಕಸಾಪ ಮಾಜಿ ಅಧ್ಯಕ್ಷ ಎಚ್. ಮಲ್ಲಿಕಾರ್ಜುನ, ಚಿಗಟೇರಿ ಕಸಾಪ ಹೋಬಳಿ ಘಟಕದ ಅಧ್ಯಕ್ಷ ಸಿ.ರಾಮನಗೌಡ, ತೆಲಿಗಿ ಕಸಾಪ ಹೋಬಳಿ ಘಟಕದ ಅಧ್ಯಕ್ಷ. ಕೆ.ಎಸ್. ವೀರಭದ್ರಪ್ಪ, ಅರಸೀಕೆರೆ ಕಸಾಪ ಹೋಬಳಿ ಘಟಕದ ಅಧ್ಯಕ್ಷ ಎಂ.ಸುರೇಶ ಮುಂತಾದವರಿದ್ದರು.

## ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮ

# ಪೂರ್ವಭಾವಿ ಸಭೆ ಇಂದು




**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಗದಗ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಹಾಗೂ ಮುಳಗುಂದ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಬೆಳಗಾವಿ ನಗರದಲ್ಲಿ ಹಮ್ಮಿಕೊಳ್ಳುತ್ತಿರುವ ಬೃಹತ್ ಸಮಾವೇಶದ ಕುರಿತು ಡಿ.24ರಂದು ಸಂಜೆ 4.30ಕ್ಕೆ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ.

ಕೆಪಿಸಿಸಿ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್.ಪಾಟೀಲ ಪಾಲ್ಗೊಳ್ಳಲಿದ್ದಾರೆ.

ಸಭೆಯಲ್ಲಿ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು, ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಮುಳಗುಂದ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಸುಂಕಾಪೂರ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ತಾಲೂಕು ಮಟ್ಟದ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ



**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಇಲ್ಲಿನ ತಾಲೂಕು ಕ್ರೀಡಾಂಗಣದಲ್ಲಿ ಡಿ.26ರ ಬೆಳಿಗ್ಗೆ 9 ಗಂಟೆಗೆ ತಾಲೂಕು ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ತಾ.ಪಂ ಇಓ ವೈ.ಎಚ್. ಚಂದ್ರಶೇಖರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ತಾಲೂಕು ಆಡಳಿತ, ತಾ.ಪಂ ಹಾಗೂ ತಾಲೂಕು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಯೋಗದಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಅಯೋಜಿಸಿದ್ದು, ತಾಲೂಕಿನ ಆಸಕ್ತ ವಿಕಲಚೇತನರು ಭಾಗವಹಿಸಬೇಕೆಂದು ಕೋರಿದ್ದಾರೆ.

ಕ್ರೀಡಾ ಸ್ಪರ್ಧೆಗಳ ಪೈಕಿ ದೈಹಿಕ ವಿಕಲಚೇತನರಿಗೆ ಊರುಗೋಲು ಓಟ, ಗುಂಡು ಎಸೆತ, ವೀಲ್ ಚೇರ್ ಓಟ, ದೃಷ್ಟಿ ದೋಷವುಳ್ಳವರಿಗೆ ಬಿಳಿ ಕೋಲು ಓಟ, ಗುಂಡು ಎಸೆತ, ಶ್ರವಣ ದೋಷವುಳ್ಳವರಿಗೆ ರನ್ನಿಂಗ್ ರೇಸ್, ಗುಂಡು ಎಸೆತ, ಬೌದ್ಧಿಕ ವಿಕಲಚೇತನರಿಗೆ ಚೆಂಡು ಎಸೆತ, ಮ್ಯೂಸಿಕಲ್ ಚೇರ್ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜನೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ತಾ.ಪಂ ಎಂಆರ್‌ಡಬ್ಲ್ಯೂ ಧನರಾಜ್ ಆರ್–ಮೊ:9901182525 ಮತ್ತು ಪುರಸಭೆಯ ನಗರ ಪುನರ್ವಸತಿ ಕಾರ್ಯಕರ್ತ ಜುಂಜಪ್ಪ–ಮೊ:9845649016 ಅಥವಾ ಗ್ರಾ.ಪಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

# ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಂದಿನ ದಿನಗಳಲ್ಲಿ ರೈತರು ಸಾವಯವ ಗೊಬ್ಬರಕ್ಕಿಂತ ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಹೆಚ್ಚು ಮಾಡುತ್ತಿದ್ದಾರೆ. ಇದು ಭೂಮಿಯ ಫಲವತ್ತತೆಯನ್ನು ಕಡಿಮೆ ಮಾಡುತ್ತದೆ. ವಿದ್ಯಾರ್ಥಿಗಳಾದ ನೀವು ಈ ಬಗ್ಗೆ ಈಗಿನಿಂದಲೇ ಅರ್ಥ ಮಾಡಿಕೊಂಡು ನಿಮ್ಮ ಪಾಲಕರಿಗೆ ಸಾವಯವ ಕೃಷಿ ಮಾಡಲು ಮತ್ತು ಸಾವಯವ ಗೊಬ್ಬರವನ್ನು ಬಳಸಲು ಒತ್ತಾಯಿಸಬೇಕೆಂದು ಸಾವಯವ ಕೃಷಿ ತಜ್ಞ ವೀರೇಶ ನೇಗಲಿ ಹೇಳಿದರು.

ಸಮೀಪದ ಕೋಟು ಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ಆಚರಿಸಲಾದ ತಂಬಾಕು ಮುಕ್ತ ದಿನಾಚರಣೆ, ಸಾವಯವ ಕೃಷಿ ಮತ್ತು ರಾಷ್ಟ್ರೀಯ ಗಣಿತ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಭೂಮಿಗೆ ವಿಷವುಣಿಸುವುದರ ಜೊತೆಗೆ ನಾವೂ ಸಹ ವಿಷದ ಸೇವನೆ ಮಾಡುತ್ತಿದ್ದೇವೆ. ಇದಕ್ಕೆ ಕಾರಣ ರಾಸಾಯನಿಕ ಗೊಬ್ಬರ. ಇದರ ಹೆಚ್ಚಾದ ಬಳಕೆಯಿಂದ ಇಂತಹ ಸಂದಿಗ್ಧ ಸ್ಥಿತಿಗೆ ನಾವು ಬಂದಿದ್ದೇವೆ. ಇದನ್ನು ತಪ್ಪಿಸಲು ನಾವು ಅನಿವಾರ್ಯವಾಗಿ ಸಾವಯವ ಕೃಷಿಯೆಡೆಗೆ ಗಮನ ಹರಿಸಬೇಕೆಂದು ಹೇಳಿದರು.

ತಂಬಾಕು ಸೇವನೆ ದೇಹದ ಮೇಲೆ ಬೀರುವ ಪರಿಣಾಮಗಳ ಕುರಿತು ವಿಜ್ಞಾನ ಶಿಕ್ಷಕ ಕೆ.ಆರ್. ಹಾಳಕೇರಿ ಪ್ರಾಯೋಗಿಕವಾದ ವಿವರಣೆಯನ್ನು ನೀಡಿದರು. ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕಿ ವಿ.ಎಸ್. ಚಲವಾದಿ ಮಾತನಾಡಿ, ತಂಬಾಕು ಸೇವನೆಯಿಂದ ದೇಹದ ಯಾವೆಲ್ಲ ಅಂಗಗಳು ಧಕ್ಕೆಗೊಳಗಾಗುತ್ತವೆ ಎಂಬುದನ್ನೂ ನೀವು ತಿಳಿದುಕೊಂಡಿದ್ದು, ಇತರರಿಗೂ ಜಾಗೃತಿ ಮೂಡಿಸಿ ಎಂದರು. ಆರ್.ಡಿ. ಜಗ್ಗಲ ಸ್ವಾಗತಿಸಿದರು. ಶಿಕ್ಷಕಿ ಟಿ.ಜಿ. ಕಂಬಾಳಿಮಠ ನಿರೂಪಿಸಿದರು. ರಾಜೇಶ್ವರಿ ನೀರಲಗಿ ವಂದಿಸಿದರು.

# ಗದಗ ಬಂದ್‌ಗೆ ವೇಲ್ಫೇರ್ ಪಾರ್ಟಿ ಬೆಂಬಲ್

■ ವಿಜಯಸಾಕ್ಷಿ ಸುದ್ದಿ, ಗದಗ



ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್‌ರವರ ಬಗ್ಗೆ ಕೇಂದ್ರ ಸಚಿವ ಅಮಿತ್ ಶಾ ಕೀಳಾಗಿ ಮತ್ತು ಅವಹೇಳನಕರ ಭಾಷೆ ಬಳಕೆ ಮಾಡಿರುವುದನ್ನು ಖಂಡಿಸಿ ಮಂಗಳವಾರ ಗದಗ ಬಂದ್‌ಗೆ ಕರೆ ಕೊಟ್ಟಿರುವ ಪ್ರಗತಿಪರ ಸಂಘಟನೆಗಳ ಒಕ್ಕೂಟಕ್ಕೆ ವೇಲ್ಫೇರ್ ಪಾರ್ಟಿ ಆಫ್ ಇಂಡಿಯಾ ಬೆಂಬಲ ಸೂಚಿಸಿದೆ ಎಂದು ವೇಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಅಧ್ಯಕ್ಷ ಜುನೇದ ಉಮಚಗಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್‌ರವರ ಬಗ್ಗೆ ಕೀಳಾಗಿ ಮತ್ತು ಅವಹೇಳನ ಭಾಷೆ ಬಳಕೆ ಮಾಡಿರುವ ಕೇಂದ್ರ ಗ್ರಹ ಸಚಿವ ಅಮಿತ್ ಶಾ ದೇಶದ ಜನತೆಯ ಕ್ಷಮೆ ಕೇಳಬೇಕು ಮತ್ತು ರಾಷ್ಟ್ರಪತಿಗಳು ಅಮಿತ್ ಶಾ ಅವರ ಸದಸ್ಯತ್ವ ರದ್ದುಗೊಳಿಸಬೇಕೆಂದು ಜುನೇದ ಉಮಚಗಿ ಆಗ್ರಹಿಸಿದ್ದಾರೆ.

## ಹೊಸ ವರ್ಷದಂದು ಮಹಿಳಾ ಸುರಕ್ಷತೆಗೆ ಹೆಚ್ಚು ಒತ್ತು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೊಸ ವರ್ಷದಂದು ಮಹಿಳಾ ಸುರಕ್ಷತೆಗೆ ಹೆಚ್ಚು ಒತ್ತು ನೀಡಲಾಗುತ್ತದೆ ಎಂದು ಸಚಿವ ಜಿ ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹೊಸ ವರ್ಷಾಚರಣೆ ದಿನ ಯಾವುದೇ ಅಹಿತಕರ ಘಟನೆ ಆಗಬಾರದು. ಬಂದೋಬಸ್ತ್ ಕ್ರಮಗಳನ್ನು ಕೈಗೊಳ್ಳುವಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರು ಹಾಗೂ ಹಿರಿಯ ಪೊಲೀಸರ ಜೊತೆ ಸಭೆ ನಡೆಸಿ ಸೂಚಿಸಲಾಗಿದೆ. ಅಲ್ಲದೇ ಸಭೆಯಲ್ಲಿ ಹಲವು ವಿಚಾರಗಳ ಬಗ್ಗೆ ಚರ್ಚೆ ಮಾಡಲಾಗಿದೆ ಎಂದರು.

**ಬಸವ ಯೋಗ ಮಂದಿರದ 'ವಿಶ್ವ ಧ್ಯಾನ ದಿನಾಚರಣೆ' ಕಾರ್ಯಕ್ರಮದಲ್ಲಿ ಎಸ್.ಕೆ. ಮೇಲ್ಮುರಿ**

# ಸದ್ವಿಚಾರಗಳು ಸಾಕಾರಗೊಳ್ಳಲು ಧ್ಯಾನ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಧ್ಯಾನವು ಬಹು ಪ್ರಾಚೀನ ಕಾಲದಿಂದಲೂ ರೂಢಿಗತವಾಗಿ ಬೆಳೆದು ಬಂದಿರುವ ಒಂದು ಸಾಧನೆ ಕ್ರಮವಾಗಿದೆ. ಪ್ರಸ್ತುತದಲ್ಲೂ ನಾವು ಸುಖ-ಸಂತೋಷದಿಂದ ಇರಬೇಕೆಂಬ ಅಭಿಲಾಷೆಯಿಂದ ನೂರೆಂಟು ವಿಚಾರಗಳನ್ನು ಸೃಷ್ಟಿಸಿಕೊಂಡು ಅವುಗಳ ಪೂರೈಕೆಗಾಗಿ ಹಲವು ವಿಧವಾಗಿ ಪ್ರಯತ್ನಿಸುತ್ತೇವೆ. ಅಂಥ ಪ್ರಯತ್ನಗಳಲ್ಲಿ ಧ್ಯಾನವು ಅಗ್ರಮಾನ್ಯವಾಗಿದೆ. ಧ್ಯಾನದಿಂದ ಮಾನವನ ಮನಸ್ಸು ಸದೃಢಗೊಂಡು ಅವನಲ್ಲಿ ಆಂತರಿಕ ಜ್ಞಾನ ಹೆಚ್ಚುವುದು. ಆಂತರಿಕ ಜ್ಞಾನದಿಂದ ಮಾನವ ತನ್ನೆಲ್ಲ ವಿಚಾರಗಳಿಗೆ ಪ್ರಾಶಸ್ತ್ಯ ನೀಡಿ ಅವುಗಳ ಯಶಸ್ಸಿನಿಂದಲೇ ಜೀವನದಲ್ಲಿ ತೃಪ್ತಿ, ನೆಮ್ಮದಿ, ಸುಖ-ಶಾಂತಿಗಳನ್ನು ಪಡೆಯಬಹುದು ಎಂದು ಹಿರಿಯ ಯೋಗ ಸಾಧಕರಾದ ಎಸ್.ಕೆ. ಮೇಲ್ಮುರಿ ತಿಳಿಸಿದರು.

ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗ ಗದಗ ಮತ್ತು ಬಸವ ಯೋಗ ಚಿಂತನಕೂಟ ಗದಗ ಇವರುಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಆಯೋಜಿಸಿದ್ದ ಮೊದಲನೇ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಧ್ಯಾನವು ಅಪರಿಮಿತ ಪ್ರಯೋಜನಗಳನ್ನು ಹೊಂದಿದೆ. ಧ್ಯಾನವನ್ನು ಕೇವಲ ಕಾರ್ಯಕ್ರಮಕ್ಕೆ ಮೀಸಲಾಗಿರಿಸದೆ ನಮ್ಮ ನಿತ್ಯ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕೆಂದು ಸೂಚಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಮುಖ್ಯೋಪಾಧ್ಯಾಯ ಆರ್.ಎಚ್. ಚಿಕ್ಕನಗೌಡರ ಮಾತನಾಡಿ, ಒಂದು ವಿಷಯ/ಗುರಿ ಸಾಧನೆಗಾಗಿ ಮನಸ್ಸನ್ನು ಸಜ್ಜುಗೊಳಿಸುವುದೇ ಧ್ಯಾನ. ಧ್ಯಾನದಲ್ಲಿ ಹಲವು ವಿಧಗಳಿವೆ. ವಿಪಶ್ಯನ ಧ್ಯಾನ, ಪ್ರತಿಕ್ಷಾ ಧ್ಯಾನ, ಇಷ್ಟಲಿಂಗ ಧ್ಯಾನ, ಪಾರಮಾರ್ಥಿಕ ಧ್ಯಾನ, ರಾಜಯೋಗ ಧ್ಯಾನ, ಸಗುಣ, ನಿರ್ಗುಣ ಧ್ಯಾನಗಳು ಶ್ರೇಷ್ಠವಾದವುಗಳಾಗಿವೆ. ಧ್ಯಾನ ಸಾಧನೆಗೆ ಪತಂಜಲಿಯ ಅಷ್ಟಾಂಗ ಯೋಗವು ಅತ್ಯುತ್ತಮವಾಗಿದೆ. ಹಂತ-ಹಂತವಾಗಿ ಧ್ಯಾನ ಸಾಧನೆಯಲ್ಲಿ ಮುನ್ನಡೆಯಬೇಕೆಂದು ಹೇಳಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಉಪಾಧ್ಯಕ್ಷೆ ವಿಜಯಾ ಚನ್ನಶೆಟ್ಟಿ, ಮಹಿಳೆಯರ ಮನಸ್ಸು ಹೆಚ್ಚಿನಾಂಶ ಚಂಚಲವಾಗಿರುತ್ತದೆ. ಚಂಚಲ ಮನಸ್ಸು ಸ್ಥಿರಗೊಳ್ಳಲು ಧ್ಯಾನ ಸಹಕಾರಿಯಾಗಿದೆ ಎಂದು ತಮ್ಮ ಅನಿಸಿಕೆ ಹೇಳಿದರು.

ಧ್ಯಾನದ ಕುರಿತು ಸಭಿಕರ ಪರವಾಗಿ ನಿವೃತ್ತ ಪ್ರಾಧ್ಯಾಪಕ ರಮೇಶ ಮೇಹರವಾಡೆ ಮಾತನಾಡಿ, ಧ್ಯಾನ ಎಂದರೆ ಕಣ್ಣು ಮುಚ್ಚಿ ಸುಮ್ಮನೆ ಕೂಡ್ರುವದಲ್ಲ, ಚಿಂತೆಗಳಿಲ್ಲದ ಚಿಂತನಯುಕ್ತ ಮನಸ್ಥಿತಿಯೇ ಧ್ಯಾನ. ತಾತ್ಕಾಲಿಕ ಸುಖ-ಭೋಗಗಳಿಗೆ ಚಿಂತೆ ಮಾಡದೆ ಶಾಶ್ವತ ಸುಖ-ಶಾಂತಿಗಾಗಿ ಚಿಂತನೆ ಮಾಡುವುದೇ ಧ್ಯಾನ ಎಂದು ತಿಳಿಸಿದರು.

ಡಿ.ಜಿ.ಎಂ ಆಯುರ್ವೇದಿಕ್ ಕಾಲೇಜು ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಮಾತನಾಡಿ, ಪ್ರಾಥಮಿಕ ಹಂತದಿಂದಲೇ ಮಕ್ಕಳಲ್ಲಿ ಧ್ಯಾನಾಸಕ್ತಿ ಬೆಳೆಸಿದರೆ ಮುಂದೆ ಅವರು ಮಹಾನ್ ಶಕ್ತಿಶಾಲಿಗಳಾಗಿ ಬೆಳೆಯುವರು ಎಂದರು.

ಯೋಗ ಮತ್ತು ಸಂಗೀತ ಶಿಕ್ಷಕಿ ಸುನಂದಾ ಜ್ಯಾನೋಪಂತರ ಧ್ಯಾನಗೀತೆ ಹಾಡಿದರು. ಪ್ರಾರಂಭದಲ್ಲಿ ಸಾಮೂಹಿಕವಾಗಿ ಓಂಕಾರ ಪ್ರಾರ್ಥನೆ, ಯೋಗ ಪ್ರಾರ್ಥನೆಗಳನ್ನು ಹೇಳಲಾಯಿತು. ನಗರಸಭಾ ಆರೋಗ್ಯ ಇಲಾಖೆಯ ಅಭಿಯಂತರರಾದ ಆನಂದ ಬದಿ ಸ್ವಾಗತಿಸಿದರು. ಬಸವ ಯೋಗ ಮಹಾವಿದ್ಯಾಲಯದ ಪ್ರಾಂಶುಪಾಲ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿ ಕಾರ್ಯಕ್ರಮ ನಿರೂಪಿಸಿದರು.ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ವಂದಿಸಿದರು.

**ಆದರಹಳ್ಳಿ ಗ್ರಾಮದ ಸರಕಾರಿ ಶಾಲೆಯಲ್ಲಿ ಬಹುದಿನಗಳ ನೀರಿನ ಸಮಸ್ಯೆಗೆ ಅಂತ್ಯ**

# ದಶಕಗಳ ಸಮಸ್ಯೆಗೆ ಕೊನೆಗೂ ಮುಕ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಆದರಹಳ್ಳಿ ಗ್ರಾಮದ ಸರಕಾರಿ ಶಾಲೆಯಲ್ಲಿನ ಮಕ್ಕಳು ಹಲವಾರು ವರ್ಷಗಳಿಂದ ನೀರು ದೊರೆಯದೆ ಸಮಸ್ಯೆ ಎದುರಿಸುತ್ತಿದ್ದು, ಅತಿ ಹೆಚ್ಚು ಮಕ್ಕಳ ಸಂಖ್ಯೆಯನ್ನು ಹೊಂದಿದ ಈ ಶಾಲೆಗೆ ಇದೀಗ ಅಧಿಕಾರಿಗಳು, ಶಿಕ್ಷಕರು, ಶಿಕ್ಷಣ ಪ್ರೇಮಿಗಳು ಸೇರಿ ಸುಮಾರು 75-80 ಸಾವಿರ ರೂ ವೆಚ್ಚದಲ್ಲಿ ಬೋರ್‌ವೆಲ್ ಹಾಕಿಸುವ ಮೂಲಕ ಬಹುದಿನಗಳ ನೀರಿನ ಸಮಸ್ಯೆಗೆ ಅಂತ್ಯ ಹಾಡಿ ಮಾದರಿ ಕಾರ್ಯ ಮಾಡಿದ್ದಾರೆ.



ಆದರಳ್ಳಿ ಹಿರಿಯ ಪ್ರಾಥಮಿಕ, ಪ್ರೌಢಶಾಲೆಯಲ್ಲಿ ಸುಮಾರು 610 ವಿದ್ಯಾರ್ಥಿಗಳು ವ್ಯಾಸಾಂಗ ಮಾಡುತ್ತಿದ್ದು, 20 ಶಿಕ್ಷಕರು ಹಾಗೂ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಇಲ್ಲಿ ಬಿಸಿಯೂಟಕ್ಕಾಗಿ ಅಡುಗೆ ತಯಾರಕರು ನಿತ್ಯ 80 ಕೊಡಗಳಷ್ಟು ನೀರನ್ನು ತಳ್ಳುಗಾಡಿಯ ಮೇಲೆ ತರುತ್ತಿದ್ದರು. ನಿತ್ಯದ ಉಪಯೋಗಕ್ಕಾಗಿ ಗ್ರಾಮದ ಹೊರಗಿನಿಂದ ನೀರು ತರುವಂತಾಗಿತ್ತು. ಬಿಸಿಯೂಟ, ಕುಡಿಯುವ ನೀರು ಹಾಗೂ ದಿನಬಳಕೆಗಾಗಿ ನೀರಿನ ಸಮಸ್ಯೆ ದಶಕಗಳಿಂದಲೂ ಇದ್ದು, ಗ್ರಾ.ಪಂಗೆ ಅನೇಕ ಬಾರಿ ಮನವಿ ಕೊಟ್ಟರೂ ಸ್ಪಂದನೆ ದೊರೆಯದೆ ಸಮಸ್ಯೆ ಹಾಗೆಯೇ ಮುಂದುವರೆದಿತ್ತು.

ಈ ಸಮಸ್ಯೆಯನ್ನು ಅರಿತ ತಾ.ಪಂ ಇಓ ಕೃಷ್ಣಪ್ಪ ಧರ್ಮರ ಆದರಹಳ್ಳಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ ನಂದೆಣ್ಣವರ, ಸಿಆರ್‌ಪಿ ಗಿರೀಶ ನೇಕಾರ, ಶಾಲಾ ಶಿಕ್ಷಕರು, ಎಸ್‌ಡಿಎಮ್‌ಸಿ ಪದಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಾಲೂಕು ಅಕ್ಷರ ದಾಸೋಹ ನಿರ್ದೇಶಕರು ಹಾಗೂ ಗ್ರಾಮದ ಶಿಕ್ಷಣ ಪ್ರೇಮಿಗಳ ಸಹಕಾರದಿಂದ ಬೋರ್‌ವೇಲ್ ಕೊರೆಯಿಸಲು ನಿರ್ಧರಿಸಿ, ಎಲ್ಲರೂ ಸೇರಿ ಸುಮಾರು 75-80 ಸಾವಿರ ರೂಗಳನ್ನು ವೆಚ್ಚ ಮಾಡಿ ಬೋರ್‌ವೆಲ್ ಕೊರೆಯಿಸಿದ್ದಾರೆ.

> ಈ ಶಾಲೆಯಲ್ಲಿ ಮಕ್ಕಳ ಸಂಖ್ಯೆ ಅಧಿಕವಾಗಿದ್ದು, ನಿತ್ಯ ನೀರಿನ ಸಮಸ್ಯೆ ಇರುವ ಬಗ್ಗೆ ಅನೇಕ ಬಾರಿ ದೂರುಗಳು ಕೇಳಿ ಬಂದಿದ್ದವು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು, ಎಸ್‌ಡಿಎಂಸಿಯವರು, ಮುಖ್ಯೋಪಾಧ್ಯಾಯರು, ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಗ್ರಾಮದ ಸಮಸ್ತ ಜನರು ಸಹಕಾರ ನೀಡಿ ಬೋರ್‌ವೆಲ್ ಹಾಕಿಸಿದ್ದು ಮಕ್ಕಳಿಗೆ ಇದು ಅನುಕೂಲವಾಗಲಿದೆ. ಇಂತಹ ಉಪಯೋಗಿ ಕಾರ್ಯಗಳು ಇನ್ನಷ್ಟು ನಡೆಯಬೇಕಿದೆ.
>
> -ಕೃಷ್ಣಪ್ಪ ಧರ್ಮರ.
> ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ, ಲಕ್ಷ್ಮೇಶ್ವರ.

ಎಲ್ಲರ ಪ್ರಾಮಾಣಿಕ, ನಿಸ್ವಾರ್ಥ ಸೇವೆಯ ಪ್ರಯತ್ನದ ಫಲವಾಗಿ 2-3 ಇಂಚಿನಷ್ಟು ಸಿಹಿ ನೀರು ದೊರೆಕಿದ್ದು, ನೀರು ದೊರಕಿದ ಸಂದರ್ಭದಲ್ಲಿ ವಿದ್ಯಾರ್ಥಿಗಳು, ಗ್ರಾಮಸ್ಥರ ಹರ್ಷೋದ್ಗಾರ ಮುಗಿಲು ಮುಟ್ಟಿತ್ತು. ಒಟ್ಟಿನಲ್ಲಿ ಶಾಲೆಗೆ ನೀರು ಬರುವಂತೆ ಮಾಡಿದ್ದು, ಮಕ್ಕಳಲ್ಲಿ ಹಾಗೂ ಶಿಕ್ಷಕರಲ್ಲಿ ಹರ್ಷ ಮೂಡಿಸಿದೆ. ಅಧಿಕಾರಿಗಳ ಆಸಕ್ತಿ ಗ್ರಾಮಸ್ಥರ ಸಹಕಾರ ಇದ್ದರೆ ಎಲ್ಲ ಕೆಲಸಗಳನ್ನು ಸರಳವಾಗಿ ನಿಭಾಯಿಸಬಹುದು ಎನ್ನುವದಕ್ಕೆ ಈ ಕಾರ್ಯ ಸಾಕ್ಷಿಯಾಗಿದೆ.

**ಅಪೂರ್ಣ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಕಾಲಾವಕಾಶ**

# ಅಪೂರ್ಣ ಅರ್ಜಿದಾರರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಗದಗ, ಮುಂಡರಗಿ, ನರಗುಂದ, ರೋಣ, ಗಜೇಂದ್ರಗಡ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ನಗರ ಸಭೆ ವ್ಯಾಪ್ತಿಯಲ್ಲಿ ಖಾಲಿ ಇರುವ ಒಟ್ಟು 46 ಅಂಗನವಾಡಿ ಕಾರ್ಯಕರ್ತೆ ಹಾಗೂ 150 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ, 17.08.2024ರಿಂದ 17.09.2024ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪ್ರಸ್ತುತ ಅರ್ಜಿ ಸಲ್ಲಿಸುವ ಕಾಲಾವಧಿ ಮುಗಿದಿದ್ದು, ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಇದರಲ್ಲಿ ಕೆಲವರಿಗೆ 1ನೇ ಹಂತದಲ್ಲಿಯೇ appliation successfully uploaded ಎಂಬ ಸಂದೇಶ ಅವರುಗಳ ಮೊಬೈಲ್‌ಗೆ ಸ್ವೀಕೃತವಾಗಿರುವುದರಿಂದ ಅರ್ಜಿಗಳನ್ನು ಪೂರ್ಣಗೊಳಿಸಿರುವುದಿಲ್ಲ. ಜಿಲ್ಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗೆ 828 ಅಪೂರ್ಣ ಅರ್ಜಿಗಳು ಹಾಗೂ ಸಹಾಯಕಿಯರ ಹುದ್ದೆಗೆ 734 ಅಪೂರ್ಣ ಅರ್ಜಿಗಳು ಸ್ವೀಕೃತವಾಗಿವೆ.

20-12-2024ರ ಸರ್ಕಾರದ ಆದೇಶದಲ್ಲಿ, ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ 26.12.2024ರಿಂದ 05.01.2025ರವರಗೆ ಅರ್ಜಿಗಳನ್ನು ಪೂರ್ಣಗೊಳಿಸಲು ವೆಬ್‌ಸೈಟ್‌ನಲ್ಲಿ ಇಲಾಖಾ ವತಿಯಿಂದಲೇ ಅವಕಾಶ ನೀಡಿ ಆದೇಶಿಸಲಾಗಿದೆ.

**ಅಭ್ಯರ್ಥಿಗಳು ಅರ್ಜಿಯನ್ನು ಈ ಕೆಳಗಿನ 4 ಹಂತಗಳಲ್ಲಿ ಪೂರ್ಣಗೊಳಿಸಬೇಕು.**

1. ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು.
2. ತಮ್ಮ ಭಾವಚಿತ್ರದ ಸಹಿಯನ್ನು ಅಪ್‌ಲೋಡ್ ಮಾಡುವುದು.
3. ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು.
4. ತಮ್ಮ ಆಧಾರ್ ಸಂಖ್ಯೆ ನಮೂದಿಸಿ, ಇ-ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಪೂರ್ಣಗೊಳಿಸುವುದು.

ಅರ್ಜಿಗಳನ್ನು ಸಲ್ಲಿಸುವಾಗ 1, 2, 3, 4ನೇ ಹಂತದಲ್ಲಿ ಪೂರ್ಣಮಾಡಲು ಆಗದೇ ಇರುವ ಅಪೂರ್ಣ ಅರ್ಜಿಗಳ ವಿವರಗಳನ್ನು ಜಿಲ್ಲಾ ಓಖಅ (https://gadag.nic.in) ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಅಪೂರ್ಣಗೊಂಡ ಅರ್ಜಿದಾರರಿಗೆ ಪೂರ್ಣಗೊಳಿಸಲು ಮಾತ್ರ ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಅಪೂರ್ಣ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಅರ್ಜಿಗಳನ್ನು ಪೂರ್ಣಗೊಳಿಸಲು 26-12-2024ರಿಂದ 05-01-2025ರ ಸಂಜೆ 5.30ರವರೆಗೆ ಕಾಲಾವಕಾಶ ನಿಗದಿಪಡಿಸಿದೆ.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗಳಿಗೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಬದುಕು ಹಸನಾದರೆ ದೇಶದ ಅಭಿವೃದ್ಧಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಾಡಿನ ರೈತರ ಬದುಕು ಹಸನಾದರೆ ದೇಶದ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ರೈತ ಸಂಘದ ಅಧ್ಯಕ್ಷ ದೇವರಾಜ ಸಂಗನಪೇಟಿ ಹೇಳಿದರು.

ಅವರು ಪಟ್ಟಣದ ಹಸಿರು ಸೇನೆ ರೈತ ಸಂಘಟನೆಯಿಂದ ಹಮ್ಮಿಕೊಂಡಿದ್ದ ರೈತ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ಆಧುನಿಕತೆ ಬೆಳೆದಂತೆ ಕೃಷಿಯಲ್ಲಿ ಹತ್ತು ಹಲವಾರು ಬದಲಾವಣೆ ಕಂಡಿದೆ. ಸಾಕಷ್ಟು ಬೆಳೆಗಳಲ್ಲಿ ಬದಲಾವಣೆ ಮಾಡುತ್ತಾ ಹೆಚ್ಚು ಹೆಚ್ಚು ಬೆಳೆಗಳನ್ನು ಬೆಳೆದರೂ ಸೂಕ್ತ ಬೆಲೆ ಇಲ್ಲದೆ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಸರಕಾರ ರೈತರ ನೆರವಿಗೆ ಸೂಕ್ತ ಸಮಯದಲ್ಲಿ ಧಾವಿಸಿ ಸೂಕ್ತ ಬೆಲೆ ನಿಗದಿ ಸೇರಿದಂತೆ ಹತ್ತು ಹಲವಾರು ಯೋಜನೆಗಳ ಮೂಲಕ ರೈತರ ಆರ್ಥಿಕವಾಗಿ ಸದೃಢರನ್ನಾಗಿ ಮಾಡದೇ ಹೋದಲ್ಲಿ ರೈತರ ಬದುಕು ಸಂಕಷ್ಟಕ್ಕೆ ಹೋಗುತ್ತದೆ ಎಂದರು.

ಬಸವರಾಜ ಕರಿಗಾರ, ಕಿರಣ ಕುಲಕರ್ಣಿ, ಮಮ್ಮದಲಿ ಸೇಖ, ಗುಡುಸಾಬ ಗಾಡಿ, ಶಂಕ್ರಯ್ಯ ಹಿರೇಮಠ, ಮಾಹಾದೇವಪ್ಪ ಗಡಾದ, ಮುತ್ತು ಸುಂಕದ, ಚನ್ನಪ್ಪ ಹುಲ್ಲೂರ, ದತ್ತಣ್ಣ ಎಳವತ್ತಿ, ಮೋಹನ ಮದ್ದಿನ, ಮಂಜುನಾಥ ಕಬಾಡೆ, ಮಾಹಾಂತೇಶ ಗುಂಜಳ, ದೇವಪ್ಪ ಅಣ್ಣಗೇರಿ, ಯಲ್ಲಪ್ಪ ಮೋಕಾಶಿ, ಗಂಗಪ್ಪ ವಿಜಾಪೂರ, ಪಕ್ಕಣ್ಣ ಹುಲಕೋಟಿ, ಖಲಂದರ ಗಾಡಿ ಇದ್ದರು.

## ನಿಧನ

### ಹನಮಂತಪ್ಪ ಕಟ್ಟಿಮನಿ



ಮುಳಗುಂದ: ಪಟ್ಟಣದ ಪುರದ ಓಣಿಯ ಯೋಧ ರವಿ ಕಟ್ಟಿಮನಿ ಅವರ ತಂದೆ ಹನಮಂತಪ್ಪ ಕಟ್ಟಿಮನಿ (65) ಸೋಮವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯೇಕವಾಗಿ ಪರವಾನಿಗೆ ಪಡೆಯಲು ಪಟ್ಟಣ ಪಂಚಾಯತಿಯಿಂದ ಅರ್ಜಿ ನಮೂನೆಯನ್ನು ಪಡೆದು, ಅಗತ್ಯವಾದ ಮಾಹಿತಿಯೊಂದಿಗೆ ಡಿಸೆಂಬರ್ 31 ಒಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಶುಲ್ಕ ರೂ.500/- ಆಗಿದ್ದು, 1 ವರ್ಷ ಚಾಲ್ತಿಯಲ್ಲಿರುತ್ತದೆ. ಜನವರಿ 01 ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವ ತಂಬಾಕು ವ್ಯಾಪಾರಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

**ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್ ಎ, ಬಿ ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆ**

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಸೇವಾ ಆಯೋಗವು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್ ಎ ಮತ್ತು ಬಿ ವೃಂದದ ಒಟ್ಟು 384 ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳನ್ನು ಡಿಸೆಂಬರ್ 29ರಂದು ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 18 ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಡಿಸೆಂಬರ್ 29ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆಯವರಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝುರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದು ಮಾಡಲು ಆದೇಶಿಸಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ನಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಗುರುತು ಪತ್ತೆ ಹಚ್ಚಲು ಸಾಧ್ಯವಾಗದ ರೀತಿಯಲ್ಲಿ ವಸ್ತ್ರ ಧರಿಸಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್ ನಡೆಸುವ ಸಿಬ್ಬಂದಿಯೊಂದಿಗೆ ಮತ್ತು ಪರೀಕ್ರಾ ಕೊಠಡಿಯ ಸಂವೀಕ್ಷಕರೊಂದಿಗೆ ಸಹಕರಿಸಿ ತಪಾಸಣೆಗೊಳಗಾಗುವುದು ಕಡ್ಡಾಯವಾಗಿರುತ್ತದೆ.

ಪರೀಕ್ಷೆಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳು ಆಯೋಗವು ನಡೆಸುವ ಹ್ಯಾಂಡ್‌ಹೆಲ್ಡ್ ಮೆಟಲ್ ಡಿಟೆಕ್ಟರ್ ತಪಾಸಣೆಗೆ ಒಳಗಾಗುವುದು ಕಡ್ಡಾಯವಾಗಿರುತ್ತದೆ. ಮೆಟಲ್ ವಾಟರ್ ಬಾಟಲ್ಸ್ ಅಥವಾ ನಾನ್ ಟ್ರಾನ್ಸಪರಂಟ್ ವಾಟರ್‌ಬಾಟಲ್‌ಗಳನ್ನು ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಮೊಬೈಲ್/ಸೆಲ್ಯೂಲಾರ್ ಫೋನ್, ಟ್ಯಾಬ್ಲೆಟ್ ಪೆನ್ ಡ್ರೈವ್, ಬ್ಲೂಟೂತ್ ಡಿವೈಸ್, ಸ್ಮಾರ್ಟ್‌ವಾಚ್, ಕ್ಯಾಲ್ಕುಲೇಟರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಉಪಕರಣಗಳು ಅಥವಾ ಲಾಗ್ ಟೇಬಲ್ಸ್ ಕೈಚೀಲ, ಪರ್ಸ್ ನೋಟುಗಳು, ಚಾರ್ಟ್, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನೂ ಸೇರಿದಂತೆ ಇನ್ನಿತರ ಯಾವುದೇ ರೀತಿಯ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ.

> ಹಿಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳೊಂದಿಗೆ ಪರೀಕ್ಷೆ ಪ್ರಾರಂಭವಾಗುವ ಎರಡು ಗಂಟೆಗೆ ಮುಂಚಿತವಾಗಿ ಸಂಪೂರ್ಣ ತಪಾಸಣೆಗೆ ಒಳಪಡುವುದು ಕಡ್ಡಾಯವಾಗಿರುತ್ತದೆ. ಕರ್ನಾಟಕ ಲೋಕಸೇವಾ ಆಯೋಗವು ಅಭ್ಯರ್ಥಿಗಳ ಪ್ರವೇಶಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳ ಕಡ್ಡಾಯವಾಗಿ ಪಾಲಿಸುವುದು. ಎಲ್ಲ ಪರೀಕ್ಷಾ ಸಿಬ್ಬಂದಿ/ಅಭ್ಯರ್ಥಿಗಳು ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ.

## ಭುವನ ಗದ್ದಿಗೆ 'ಯುವ ಕ್ರೀಡಾಸಿರಿ' ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪ್ರತಿಭಾವಂತ ಬಾಲಕ ಭುವನ ಗದ್ದಿ ಯುವ ಕ್ರೀಡಾಸಿರಿ ಪ್ರಶಸ್ತಿಗೆ ಪಾತ್ರನಾಗಿದ್ದು, ಶನಿವಾರ ಹಾವೇರಿ ಜಿಲ್ಲೆ ಶಿಗ್ಗಾಂವ ತಾಲೂಕಿನ ಬಿಸನಹಳ್ಳಿ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾಶಿ ಜಂಗಮವಾಡಿ ಮಠದ ಡಾ. ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಟೇಕ್ವಾಂಡೋ (ಕರಾಟೆ) ಕ್ರೀಡಾಪಟು ಭುವನ್ ಗದ್ದಿ ಇವರಿಗೆ 'ಯುವ ಕ್ರೀಡಾಸಿರಿ' ಪ್ರಶಸ್ತಿ ನೀಡಿ ಗೌರವಿಸಿದರು.

ಸಾಧಕ ಬಾಲಕನಿಗೆ ಶ್ರೀ ಜಗದ್ಗುರು ಪಂಚಾಚಾರ್ಯ ವೇದ, ಆಗಮ, ಸಂಸ್ಕೃತ, ಸಂಗೀತ, ಯೋಗ ಮತ್ತು ಜ್ಯೋತಿಷ್ಯ ಪಾಠಶಾಲೆ ಪಾಠಶಾಲೆ ಕಾಶಿ ಜಂಗಮವಾಡಿ ಖಾಸಾ ಶಾಖಾ ಮಠ, ಬಿಸನಳ್ಳಿಯಲ್ಲಿ ಲೋಕ ಕಲ್ಯಾಣಾರ್ಥವಾಗಿ ಇಷ್ಟಲಿಂಗ ಮಹಾಪೂಜೆ ಹಾಗೂ 'ವೀರಶೈವ ಅಷ್ಟಾವರಣ ವಿಜ್ಞಾನ' ಆಶೀರ್ವಚನ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಭುವನ ಗದ್ದಿಯ ಸಾಧನೆಗೆ ತರಬೇತಿ ನೀಡಿದ ತರಬೇತುದಾರ ರವಿ ಮಾಸ್ಟರ್ ಹಾಗೂ ಲಕ್ಷ್ಮೇಶ್ವರ ಜನತೆ ಹರ್ಷ ವ್ಯಕ್ತಪಡಿಸಿದ್ದಾರೆ.

### ರೈತ ದಿನಾಚರಣೆ ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಕರೆ

## ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೋಟಿ ವಿದ್ಯೆಗಿಂತ ಮೇಟಿ ವಿದ್ಯೆ ಮೇಲು, ಒಕ್ಕಲಿಗ ಒಕ್ಕದಿರೆ ಬಿಕ್ಕುವುದು ಜಗವೆಲ್ಲ ಎನ್ನುವಂತೆ ಇಡೀ ವಿಶ್ವಕ್ಕೆ ಕೃಷಿಕರ ಅಗತ್ಯತೆ, ಪ್ರಾಮುಖ್ಯತೆ ಬಹಳಷ್ಟಿದ್ದು, ಈ ನಿಟ್ಟನಲ್ಲಿ ರೈತರಿಗೆ ಸರಕಾರ, ಸಮಾಜ ಸಹಕಾರ-ಸೌಲಭ್ಯ, ಗೌರವ ನೀಡುವ ಮತ್ತು ಅವರ ಹಿತ ಕಾಣುವ ಗುರುತರ ಜವಾಬ್ದಾರಿ ನಿರ್ವಹಿಸಲೇಬೇಕಾಗುತ್ತದೆ ಎಂದು ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕು ಕೃಷಿಕ ಸಮಾಜ ನವದೆಹಲಿ ರಾಷ್ಟ್ರೀಯ ರೈತ ಸಂಘಟನೆ ವತಿಯಿಂದ ಪಟ್ಟಣದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದ ಮಾಜಿ ಪ್ರಧಾನಿ ದಿ.ಚೌಧರಿ ಚರಣ್ ಸಿಂಗ್ ಅವರ ಜನ್ಮದಿನವಾದ ಡಿಸೆಂಬರ್ 23ರಂದು ಪ್ರತಿ ವರ್ಷ ರಾಷ್ಟ್ರೀಯ ರೈತ ದಿನವನ್ನು ಆಚರಿಸಲಾಗುತ್ತಿದೆ. ಚರಣ್ ಸಿಂಗ್ ಅವರು ದೇಶದ ಅನ್ನದಾತರ ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಹತ್ತಾರು ನೀತಿಗಳನ್ನು ಜಾರಿಗೊಳಿಸಿ ಆಧುನಿಕ ಕೃಷಿ ಪದ್ಧತಿ ಅಳವಡಿಕೆಗೆ ಪ್ರೋತ್ಸಾಹ ನೀಡಿದ್ದರು. ಬರಗಾಲ, ಅತಿವೃಷ್ಟಿ, ಹವಾಮಾನ ವೈಪರಿತ್ಯ, ರೋಗಬಾಧೆ, ಬೆಳೆಹಾನಿ ಎಲ್ಲವನ್ನೂ ಎದುರಿಸಿ ಕೃಷಿಯನ್ನು ಲಾಭದಾಯಕವಾಗಿಸಿಕೊಳ್ಳುವುದು ರೈತರಿಗೆ ಸವಾಲಾಗಿದೆ. ಕೃಷಿಯೂ ಒಂದು ವಿಜ್ಞಾನವಾಗಿದ್ದು, ರೈತರು ಸಾಂಪ್ರದಾಯಿಕ, ಸಾವಯುವ ಕೃಷಿಯೊಂದಿಗೆ ಬೆಳೆ ಪರಿವರ್ತನೆ,



ಬೀಜೋಪಚಾರ, ಸಸ್ಯ ಸಂರಕ್ಷಣಾ ಕ್ರಮಗಳನ್ನು ಅನುಸರಿಬೇಕು.

ವಿದ್ಯಾವಂತರ, ಕೃಷಿ ಅಧಿಕಾರಿಗಳ ಸಹಕಾರ ಹಾಗೂ ಸರ್ಕಾರದ ಯೋಜನೆಗಳ ಸದ್ವಿನಿಯೋಗದೊಂದಿಗೆ ಕೃಷಿಯಲ್ಲಿ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಉತ್ತಮ ಬೆಳೆಯೊಂದಿಗೆ ಆರ್ಥಿಕ ಸ್ವಾವಲಂಬನೆ ಹೊಂದಬೇಕು. ಅದಕ್ಕಾಗಿ ರೈತರು ಕೃಷಿಯ ಜತೆಗೆ ಕೃಷಿಗೆ ಪೂರಕವಾದ ಹೈನುಗಾರಿಕೆ, ಸಾವಯುವ ಗೊಬ್ಬರ ತಯಾರಿಕೆ, ಕೋಳಿ, ಕುರಿ ಸಾಕಾಣಿಕೆಯಂತಹ ಉಪ ಕಸುಬುಗಳನ್ನು ಮಾಡುವ ಮೂಲಕ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಾನ್ನಿಧ್ಯವನ್ನು ಸಿದ್ದಲಿಂಗಯ್ಯಶಾಸ್ತ್ರೀ ಹಿರೇಮಠ ವಹಿಸಿದ್ದರು. ಹಿರಿಯ ರೈತರಾದ ಶಂಕರಣ್ಣ ಬೊಮ್ಮನಹಳ್ಳಿ ದಂಪತಿಗಳಿಗೆ, ಪ್ರಗತಿಪರ ರೈತ ಹನಮಂತಪ್ಪ ಚಿಂಚಲಿ ಸೇರಿ ರೈತರು ಹಾಗೂ ಕೃಷಿ ಕೇಂದ್ರದ ಅನುವುಗಾರರು, ಅಧಿಕಾರಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮ ಅಧ್ಯಕ್ಷತೆವಹಿಸಿದ್ದ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮಾತನಾಡಿದರು. ಹೆಸ್ಕಾಂ ಅಧಿಕಾರಿ ಆಂಜನೇಯಪ್ಪ, ಅಣ್ಣ ಇಲಾಖೆ ಅಧಿಕಾರಿ ಮಂಜುನಾಥ ಚೌಹಾಣ್, ಅಗ್ನಿಶಾಮಕ ಇಲಾಖೆಯ ವಿನಯ ಬಳ್ಳಾರಿ, ತೋಟಗಾರಿಕೆ ಇಲಾಖೆ ನದಾಫ್, ಎಸ್‌ಬಿಐ ಮ್ಯಾನೇಜರ್ ಬಿ.ಅಶೋಕ ಕುಮಾರ, ಕೆವಿಜಿ ಬ್ಯಾಂಕ್ ಮ್ಯಾನೇಜರ್ ಕಿರಣ ಹುಡೇದ, ಕರ್ನಾಟಕ ರಾಜ್ಯ ಹಸಿರು ಸೇನ್ಯ ನಾಗರಾಜ ಕಳ್ಳಿಹಾಳ, ಕಿಸಾನ್ ವಿಕಾಸ ಜಾಗೃತಿ ಸಂಘ ತಾಲೂಕಾಧ್ಯಕ್ಷ ಶಿವಾನಂದ ಲಿಂಗಶೆಟ್ಟಿ, ಭಾರತಿಯ ಕಿಸಾನ್ ಸಂಘ ಜಿಲ್ಲಾ ಉಪಾಧ್ಯಕ್ಷ ಟಾಕಪ್ಪ ಸಾತಪುತೆ, ಚನ್ನಪ್ಪ ಹೆಬಸೂರ, ನಿಂಗಪ್ಪ ಮೋಡಿ, ಶಿವಪುತ್ರಪ್ಪ ತಾರಿಕೊಪ್ಪ, ಆನಂದ ಅಮರಶೆಟ್ಟಿ, ಹನುಮಂತಪ್ಪ ಚಿಂಚಲಿ, ಬಸವರಾಜ ಗೋಡಿ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು, ರೈತಪರ ಸಂಘಟನೆಗಳ ಮುಖಂಡರು, ರೈತರು ಇದ್ದರು.

ಅನ್ನಪೂರ್ಣ ಬೊಮ್ಮನಹಳ್ಳಿ ಪ್ರಾರ್ಥಿಸಿದರು. ಮಲ್ಲು ಕಳಸಾಪುರ ರೈತಗೀತೆ ಹಾಡಿದರು. ರೈತಹಿತ ಚಿಂತಕ ಶಂಕರ ಬ್ಯಾಡಗಿ ನಿರ್ವಹಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿಕ ಸಮಾಜ ನವದೆಹಲಿ ರಾಷ್ಟ್ರೀಯ ರೈತ ಸಂಘಟನೆಯ ತಾಲೂಕಾಧ್ಯಕ್ಷ ಚನ್ನಪ್ಪ ಷಣ್ಮುಕಿ, ಕೃಷಿಯತ್ತ ಚಿತ್ತ ಹರಿಸಿ ಭೂಮಿಯ ಫಲವತ್ತತೆ ಹೆಚ್ಚಿಸಬೇಕು. ಜಿಲ್ಲೆಯಲ್ಲಿ ರಾಜಕೀಯ ಇಚ್ಛಾಶಕ್ತಿ ಕೊರತೆ ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದ ಕಳೆದ ಹಲವು ವರ್ಷದಿಂದ ಬೆಳೆಹಾನಿ ಪರಿಹಾರ, ಬೆಳೆವಿಮೆ ಮೂಗಿಗೆ ತುಪ್ಪ ಸವರಿದಂತಾಗುತ್ತಿದೆ. ರೈತರಿಗೆ ಅತ್ಯವಶ್ಯವಾದ ಕೃಷಿ, ಕಂದಾಯ, ತೋಟಗಾರಿಕೆ, ಅರಣ್ಯ, ಹೆಸ್ಕಾಂ, ಪೊಲೀಸ್, ಅಗ್ನಿಶಾಮಕ, ಎಪಿಎಂಸಿ ಮತ್ತು ಬ್ಯಾಂಕಿನ ಅಧಿಕಾರಿಗಳು ರೈತರ ಹಿತ ಕಾಪಾಡುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

## ಅಮಿತ್ ಶಾ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂಸತ್ ಭವನದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರಿಗೆ ಅವಮಾನ ಮಾಡಿರುವುದನ್ನು ಖಂಡಿಸಿ ಯುವ ಕರ್ನಾಟಕ ಭೀಮ್ ಸೇನೆ ಯುವ ಶಕ್ತಿ ಸಂಘ ಗದಗ ಜಿಲ್ಲಾ ಘಟಕದ ವತಿಯಿಂದ ಪಾದಯಾತ್ರೆಯ ಮೂಲಕ ತೆರಳಿ ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಮು ಬಾಗಲಕೋಟ ಮಾತನಾಡಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಘನತೆಗೆ ಕುಂದು ಬರುವ ಹಾಗೆ ನಡೆದುಕೊಂಡ ಕೇಂದ್ರ ಗೃಹ ಮಂತ್ರಿಗಳಾದ



ಅಮಿತ್ ಶಾ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಖಾಜಿಸಾಬ ಗಬ್ಬೂರವರು ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರರನ್ನು ವಿರೋಧಿಸುವುದು ಒಂದೇ, ಭಾರತವನ್ನು ವಿರೋಧಿಸುವುದೂ ಒಂದೇ ಆಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆನಂದ ಗಡ್ಡದೇವರ, ಜಬಿವುಲ್ಲಾ ಬೋದ್ಲೆಖಾನ ಮಾತನಾಡಿದರು. ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿಗಳಿಗೆ, ರಕ್ಷಣೆ ನೀಡಿದ ಪೊಲೀಸ್ ಇಲಾಖೆಗೆ, ಮಾಧ್ಯಮ ಮಿತ್ರರಿಗೆ, ಸಂಘದ ಎಲ್ಲ ಸದಸ್ಯರಿಗೂ ರಫೀಕ ಕರೆಕಾಯಿ ಕೃತಜ್ಞತೆಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ನಾಸೀರ ಚಿಕೇನಕೊಪ್ಪ, ಸಾದಿಕ್ ಧಾರವಾಡ, ವೆಂಕಪ್ಪ ತಾಳದವರ, ಮೆಹಬೂಬ ಬೆಟಗೇರಿ, ಅಲ್ತಾಫ ಕಟ್ಟಿಮನಿ, ನಜೀರ ಬಳ್ಳಾರಿ, ವಿಠ್ಠಲ ವಿಭೂತಿ, ರಶೀದ ನಾಗರದಿನ್ನಿ, ಇರ್ಫಾನ ಶಿರಹಟ್ಟಿ, ತಾಜುದ್ದೀನ ಕಳಸಾಪೂರ, ಪರಶುರಾಮ ಬೆಟಗೇರಿ, ದುರಗೇಶ ಕಿನ್ನರಿ, ಮೆಹಬೂಬ ಬೆಟಗೇರಿ, ಇಸಾಕ್ ನದಾಫ್, ತನ್ವೀರ ಬಡೆದಾವಜಿ, ತೌಸಿಫ ಬೋಗೇರಿ, ತೌಫೀಕ್ ಹತ್ತಿವಾಲೆ, ಮಹಮ್ಮದರಫೀಕ ಹಣಗಿ, ಮುಸ್ತಫಾ ಶಿರೋಳ ಮುಂತಾದವರಿದ್ದರು.

## ರಾಷ್ಟ್ರೀಯ ಗಣಿತ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಣವಿ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಭಾರತೀಯ ವಿಜ್ಞಾನ ಸಂಸ್ಥೆ ಬೆಂಗಳೂರು ಹಾಗೂ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಭಾರತ ಸರ್ಕಾರ ಮತ್ತು ಜಿಲ್ಲಾ ಪಂಚಾಯಿತಿ ಗದಗ ಇವರ ಸಹಯೋಗದಲ್ಲಿ ಶ್ರೀನಿವಾಸ ರಾಮಾನುಜಮ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಣವಿ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಶಶಿಧರ ಬಡಿಗೇರ ವಹಿಸಿದ್ದರು. ನಿವೃತ್ತ ಗಣಿತ ಶಿಕ್ಷಕ ಎಂ.ಎಸ್. ಪೂಜಾರ್ ಉಪನ್ಯಾಸವನ್ನು ನೀಡಿದರು. ರಾಷ್ಟ್ರೀಯ ಗಣಿತ ದಿನದ ಪ್ರಯುಕ್ತ ಮಕ್ಕಳ ಸಂತೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ವಿಶೇಷವಾಗಿತ್ತು.

ಮುಖ್ಯ ಅಥಿತಿಗಳಾಗಿ ವಿಜ್ಞಾನ ವಿಷಯ ಪರಿವೀಕ್ಷಕರಾದ ಬಂಡಿವಡ್ಡರ್, ಜಿಲ್ಲಾ ಪಂಚಾಯಿತಿ (ಎನ್. ಆರ್.ಡಿ.ಎಂ.ಎಸ್ ಶಾಖೆ) ಮಂಜುನಾಥ ಎಸ್.ತೋಟದ, ಶಿಕ್ಷಕ ವೃಂದ ಹಾಗೂ ಮಕ್ಕಳು ಭಾಗವಹಿಸಿದ್ದರು.

## ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು



■ ವಿಜಯಸಾಕ್ಷಿ ಸುದ್ದಿ, ರೋಣ

ಶಿಕ್ಷಣ ಕಲಿಯುವಾಗಲೇ ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು. ಆ ಕನಸನ್ನು ನನಸು ಮಾಡಿಕೊಳ್ಳಲು ನಿರಂತರವಾದ ಪರಿಶ್ರಮದ ಜೊತೆಗೆ ಅಭ್ಯಾಸ ಮುಖ್ಯವಾಗುತ್ತದೆ. ಆ ಅಭ್ಯಾಸವನ್ನು ನೀವು ಮುಂದುವರೆಸಿದ್ದಾದಲ್ಲಿ ನಿಮಗೆ ಯಶಸ್ಸು ಖಂಡಿತವಾಗಿ ದೊರಕುತ್ತದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ತಾಲೂಕಿನ ಮೆಣಸಗಿ ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡಿರುವ ವಿವಿಧ ಕಾಮಗಾರಿಗಳ ಕಡತ ಹಾಗೂ ಸ್ಥಳ ಪರಿಶೀಲನೆ ನಡೆಸಿದ ಬಳಿಕ ರಾತ್ರಿ ಗ್ರಾಮದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಸತಿ ನಿಲಯಕ್ಕೆ ಭೇಟಿ ನೀಡಿದ ಅವರು, ವಸತಿಯಲ್ಲಿನ ಕುಂದು ಕೊರತೆ ಸೇರಿದಂತೆ ಊಟದ ಗುಣಮಟ್ಟದ ಕುರಿತು ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು.

ವಸತಿ ನಿಲಯದ ಮಕ್ಕಳಿಗೆ ಒಂದು ಗಂಟೆಯ ಕಾಲ ಗಣಿತ ವಿಷಯದ ಕುರಿತು ಕ್ಲಾಸ್ ತೆಗೆದು-ಕೊಂಡು ವಿದ್ಯಾರ್ಥಿಗಳಿಗೆ ಪಾಠ ಮಾಡಿದರು. ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಅಗತ್ಯ ಸಮಯ, ವಿಷಯಗಳ ಆಯ್ಕೆ, ಯಾವ ದಿನ ಪತ್ರಿಕೆಗಳಲ್ಲಿ ಯಾವ ವಿಷಯವನ್ನು ಹೆಚ್ಚು ಅಭ್ಯಾಸ ಮಾಡಬೇಕು, ಮುಂಜಾನೆ ಎಷ್ಟು ಗಂಟೆಗೆ ಅಭ್ಯಾಸ ಪ್ರಾರಂಭಿಸಬೇಕು ಹೀಗೆ ಹಲವಾರು ವಿಷಯಗಳ ಕುರಿತು ಮಕ್ಕಳೊಂದಿಗೆ ಸಂವಾದ ನಡೆಸಿ, ಕಲಿಕೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳಲು ಸಲಹೆ ನೀಡಿದರು.

ತದನಂತರ ವಿದ್ಯಾರ್ಥಿಗಳೊಂದಿಗೆ ಸರತಿ ಸಾಲಿನಲ್ಲಿ ಕುಳಿತು ಊಟ ಮಾಡಿದ ಅವರು, ವಸತಿ ನಿಲಯದ ಮೇಲ್ವಿಚಾರಕರಿಗೆ ಉತ್ತಮ ಗುಣಮಟ್ಟದ ಆಹಾರವನ್ನು ಮಕ್ಕಳಿಗೆ ನೀಡಲು ಸೂಚಿಸಿದರು. ವಸತಿ ನಿಲಯದ ಹೊಸ ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಿ ಚೆಕ್ಕಬಂದಿ ಮತ್ತು ಉತಾರ ನೀಡಲು ಪಿ.ಡಿ.ಓ ಅವರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಆಇಔ,ಖಅ,ಖಂಇ, ಗ್ರಾ.ಪಂ ಅಧ್ಯಕ್ಷರು, ಸದಸ್ಯರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

### ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿ ಪರಿಶೀಲಿಸಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

## ಜೂನ್ ವೇಳೆಗೆ ಕಾಮಗಾರಿ ಮುಕ್ತಾಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿಗೆ ಕೇಂದ್ರ ಸರ್ಕಾರದಿಂದ ಅನುದಾನ ದೊರೆತಿದ್ದು, ಬೈಪಾಸ್ ಅಗಲೀಕರಣ ಹಾಗೂ ಉನ್ನತ್ತೀಕರಣ ಕಾಮಗಾರಿ ಭರದಿಂದ ಸಾಗಿದೆ. ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿಯು 2025ರ ಜೂನ್ ವೇಳೆಗೆ ಮುಕ್ತಾಯವಾಗಲಿದೆ ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ್ ಜೋಶಿ ಹೇಳಿದರು.

ಸೋಮವಾರ ವಿಮಾನ ನಿಲ್ದಾಣ ರಸ್ತೆಯ ಇನ್ಫೋಸಿಸ್ ಮುಂಭಾಗದಲ್ಲಿ ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿನ ರೈಲ್ವೆ ಸೇತುವೆ ಹಾಗೂ ಗಬ್ಬೂರು ಸೇತುವೆ 2025ರ ಸೆಪ್ಟೆಂಬರ್ ತಿಂಗಳಲ್ಲಿ ಪೂರ್ಣಗೊಳ್ಳಲಿದೆ. ಹೆದ್ದಾರಿಯ ಪಕ್ಕದಲ್ಲಿ ಅವಶ್ಯವಿರುವಲ್ಲಿ ಸರ್ವಿಸ್ ರಸ್ತೆ



ವಿಮಾನ ನಿಲ್ದಾಣ ರಸ್ತೆಯ ಇನ್ಫೋಸಿಸ್ ಮುಂಭಾಗದಲ್ಲಿ ಹುಬ್ಬಳ್ಳಿ-ಧಾರವಾಡ ಹೆದ್ದಾರಿಯಿಂದ ಹುಬ್ಬಳ್ಳಿ ನಗರಕ್ಕೆ ಆಗಮಿಸುವವರಿಗೆ ಅತ್ಯಾಕರ್ಷಕ ಸ್ವಾಗತ ಫಲಕವನ್ನು ಅಳವಡಿಸಲಾಗುತ್ತದೆ. ಅದರ ಜೊತೆಗೆ ವೃತ್ತವನ್ನು ನಿರ್ಮಿಸಿ, ಫೌಂಟೇನ್ ಮಾದರಿಯನ್ನು ಕಟ್ಟಲು ಕ್ರಮ ಕೈಗೊಳ್ಳುವಂತೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಹೆದ್ದಾರಿ ನಿರ್ಮಾಣಕ್ಕೆ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸಹಕಾರ ಕೂಡ ತೆಗೆದುಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ ಎಂದು ಅವರು ತಿಳಿಸಿದರು.

ಹಾಗೂ ಕೆಳ ಸೇತುವೆಗಳನ್ನು ಕೂಡ ನಿರ್ಮಿಸಲಾಗುತ್ತಿದೆ. ಇದರಿಂದ ಜನರಿಗೆ ಅನುಕೂಲವಾಗಲಿದೆ. ನೇಕಾರ ನಗರ, ತಾರಿಹಾಳ ಹಾಗೂ ಇತರೆಡೆ ಕೆಲವು ವರ್ಷಗಳಿಂದ ಹೆದ್ದಾರಿಯ ಪಕ್ಕದಲ್ಲಿ ಮನೆಗಳನ್ನು ನಿರ್ಮಿಸಿಕೊಂಡವರಿಗೆ ಬೇರೆಡೆ ತೆರಳುವಂತೆ ಸೂಚಿಸಲಾಗಿದೆ. ಅಲ್ಲದೇ ಅವರಿಗೆ ಪರಿಹಾರ ಧನವನ್ನು ವಿತರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಪೊಲೀಸ್ ಆಯುಕ್ತರಾದ ಎನ್ ಶಶಿಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಡಿಸಿಪಿ ರವೀಶ್ ಆರ್., ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಾದ ಭುವನೇಶ್ವರಕುಮಾರ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಅವಿರೋಧ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ದಿ. ರಡ್ಡಿ ಸಹಕಾರಿ ಬ್ಯಾಂಕ್ ನಿಯಮಿತ ಧಾರವಾಡ ಇದರ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆಯಲ್ಲಿ ಹುಲಕೋಟಿಯ ವಾಯ್. ಬಿ. ಕರಿಕಟ್ಟಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇವರ ಆಯ್ಕೆಗೆ ಕಾನೂನು ನ್ಯಾಯ ಮಾನವ ಹಕ್ಕುಗಳ ಮತ್ತು ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ ಪಾಟೀಲ ಹಾಗೂ ಮಾಜಿ ಶಾಸಕ ಡಿ. ಆರ್. ಪಾಟೀಲ ಅಭಿನಂದಿಸಿದ್ದಾರೆ.

ಕರ್ನಾಟಕ ಸರಕಾರ

**ಸಹಾಯಕ ನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ಗದಗ**

ಎಸ್.ಪಿ.ಆಫೀಸ್ ಎದುರಿಗೆ ಹೊಸ ಬಸ್‌ನಿಲ್ದಾಣದ ಹಿಂಭಾಗ ಗದಗ

ಕಛೇರಿ ದೂರವಾಣಿ : (08372-297258) (ಇ.ಮೇಲ್ : tswogdg@gmail.com)

ಸಂ:ಸನಿಸಕಇ/ಗದಗ /ಎಸ್-2/ಬಾವಾ/2024-25 ದಿನಾಂಕ : 20-12-2024

**ಟೆಂಡರ್ ಪ್ರಕಟಣೆ**

2024-25 ನೇ ಸಾಲಿಗಾಗಿ ಸರಕಾರಿ ಅಧಿಕೃತ ಕೆಲಸ ಕಾರ್ಯಗಳ ಅನುಷ್ಠಾನಕ್ಕಾಗಿ ಗದಗ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಸುಸ್ಥಿತಿಯಲ್ಲಿರುವ ಹಾಗೂ ಚಾಲ್ತಿ ಕಾಗದ ಪತ್ರ ಹೊಂದಿರುವ (2024 ರ ಹಾಗೂ ಇತ್ತೀಚಿನ ವಿನ್ಯಾಸದ) (ಹವಾ ನಿಯಂತ್ರಣ ರಹಿತ ವಾಹನ- Non AC) ಟಾಟಾ ವಿಸ್ತಾ, ಬೊಲೇರೊ ಹಾಗೂ ಇತರೆ ಕಂಪನಿಯ ವಾಹನಗಳನ್ನು ತಿಂಗಳ ಬಾಡಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಒಂದು (ಎಕ) ಲಕೋಟೆ ವಿಧಾನದಲ್ಲಿ ಟೆಂಡರ ಆಹ್ವಾನಿಸಲಾಗಿದೆ ಆಸಕ್ತ ಟೆಂಡರದಾರರು ಟೆಂಡರ್ ಸಲ್ಲಿಸಬಹುದಾಗಿದೆ ಹಾಗೂ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಪ್ರವಾಸೋದ್ಯಮ ನಿಗಮಗಳಿಂದ ಸಹಾಯಧನದ ಮೂಲಕ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಾಹನಗಳ ಮಾಲಕರುಗಳಿಗೆ ಮೊದಲು ಆದ್ಯತೆ ಹಾಗೂ ಇತರೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಾಹನ ಮಾಲೀಕರಿಗೆ 2ನೇ ಅದ್ಯತೆ ಮೂಲಕ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಖಾಲಿ ಟೆಂಡರ್ ಫಾರಂಗಳನ್ನು ಪಡೆಯುವ ಕೊನೆಯ ದಿನಾಂಕ : **31/12/2024** ಸಂಜೆ 4:00 ಗಂಟೆಗೆ. ಸೀಲು ಮಾಡಿದ ಟೆಂಡರ್ ಫಾರಂಗಳನ್ನು ಪೆಟ್ಟಿಗೆಗೆ ಹಾಕುವ ಕೊನೆಯ ದಿನಾಂಕ : **01/01/2025** ಸಂಜೆ 4:00 ಗಂಟೆಗೆ. ಹಾಗೂ ಟೆಂಡರ್ ಪೆಟ್ಟಿಗೆಯನ್ನು ತೆರೆಯುವ ದಿನಾಂಕ : **02/01/2025** ಬೆಳಿಗ್ಗೆ 11:00 ಗಂಟೆಗೆ ಪ್ರತಿ ವಾಹನಕ್ಕೆ ಇ.ಎಂ.ಡಿ ಮೊತ್ತ ರೂ. **10,000=00** ಇದ್ದು ಟೆಂಡರ ಫಾರ್ಮ ಬೆಲೆ ರೂ. **1500=00** ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : **08372-297258** ಗೆ ಸಂಪರ್ಕಿಸಲು ಕೋರಲಾಗಿದೆ.

ಸಹಿ/- ಸಹಾಯಕ ನಿರ್ದೇಶಕರು
ಸಮಾಜ ಕಲ್ಯಾಣ ಇಲಾಖೆ ಗದಗ

ವಾಸಾಸಂಇ/ಗದಗ/ಕೆಎಸ್ಎಂಸಿಎ/482/24-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka